ಸಂಪುಟ : 10 ಸಂಚಿಕೆ: 48 ಪುಟ : 4+2 ಬೆಲೆ: 3.00 ಶುಕ್ರವಾರ ಮಾರ್ಚ್ 21 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 48 Pages : 4+2 Price : 3.00 Friday March 21 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ನಾಳೆ ವಿದ್ಯುತ್ ವ್ಯತ್ಯಯ

■ ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಬೆಟಗೇರಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಮಾರ್ಚ್ 22ರಂದು ತ್ರೈಮಾಸಿಕ ಕೆಲಸ ಕೈಗೊಳ್ಳುವುದರಿಂದ ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

110 ಕೆವ್ಹಿ ಬೆಟಗೇರಿ ಉಪಕೇಂದ್ರದಿಂದ ಪೂರೈಕೆಯಾಗುವ ಎಲ್ಲಾ ನಗರ, ಕೈಗಾರಿಕಾ, ನಿರಂತರಜ್ಯೋತಿ, ಇ.ಐ.ಪಿ, ಸೋಲಾರ್ ಐ.ಪಿ.ಪಿ ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಹೆಸ್ಕಾಂ ಪ್ರಕಟಣೆ ವಿನಂತಿಸಿದೆ.

## ಎಸ್‌ಎಸ್‌ಎಲ್‌ಸಿ ಪರೀಕ್ಷೆ ವೀಕ್ಷಕರ ನೇಮಕ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯು ಎಸ್.ಎಸ್.ಎಲ್.ಸಿ. ಪರೀಕೆಯನ್ನು ಮಾರ್ಚ್ 21ರಿಂದ ಏಪ್ರಿಲ್ 4ರವರೆಗೆ ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 1.15 ಗಂಟೆಯವರೆಗೆ ನಡೆಸಲಿದೆ.

ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು, ಶಾಂತಿ–ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಪ್ರತಿ ಪರೀಕ್ಷಾ ಕೇಂದ್ರಕ್ಕೆ ಒಬ್ಬ ಅಧಿಕಾರಿಯನ್ನು ವಿಕ್ಷಕರನ್ನಾಗಿ ನೇಮಕ ಮಾಡಲಾಗಿದೆ ಎಂದು ಜಿಲ್ಲಾ ದಂಡಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

## ಅಭಿನಂದನಾ ಸಮಾರಂಭ ಮಾ. 23ಕ್ಕೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ಕಳೆದ ಜ.29ರಿಂದ ಫೆ. 8ರವರೆಗೆ ನಡೆದ ಕೋಡಿಕೊಪ್ಪದ ಹಠಯೋಗಿ ಶ್ರೀ ವೀರಪ್ಪಜ್ಜನವರ ಮಹಾಗಣಾರಾಧನೆಯ ಶತಮಾನೋತ್ಸವ ಮತ್ತು ಮಹಾರಥೋತ್ಸವದ ಸಂದರ್ಭದಲ್ಲಿ ಶ್ರಮಿಸಿ, ಸಹಕರಿಸಿದ ಸರ್ವರಿಗೂ ಶ್ರೀಮಠದ ವತಿಯಿಂದ ಅಭಿನಂದನಾ ಸಮಾರಂಭವನ್ನು ಮಾ. 23ರ ಬೆಳಿಗ್ಗೆ 10.30ಕ್ಕೆ ಶ್ರೀಮಠದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಡಾ. ಎಲ್.ಎಸ್. ಗೌರಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಭಿನಂದನಾ ಸಮಾರಂಭದ ದಿವ್ಯ ಸಾನ್ನಿಧ್ಯವನ್ನು ನರೇಗಲ್ಲ ಹಿರೇಮಠದ ಷ.ಬ್ರ. ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ವಹಿಸಲಿದ್ದಾರೆ. ಅಧ್ಯಕ್ಷತೆಯನ್ನು ಶ್ರೀ ಕೋಡಿಕೊಪ್ಪದ ಹಠಯೋಗಿ ಹುಚ್ಚೀರೇಶ್ವರ ಟ್ರಸ್ಟ್ ಕಮಿಟಿಯ ಅಧ್ಯಕ್ಷರಾದ ಡಾ. ಎಂ.ಸಿ. ಚಪ್ಪನ್ನಮಠ ವಹಿಸಲಿದ್ದಾರೆ. ಶ್ರೀಮಠದ ಸದ್ಭಕ್ತರೆಲ್ಲರೂ ಈ ಅಭಿನಂದನಾ ಸಮಾರಂಭದಲ್ಲಿ ಪಾಲ್ಗೊಂಡು, ಪ್ರಸಾದ ಸ್ವೀಕರಿಸಿ ಶ್ರೀ ವೀರಪ್ಪಜ್ಜನವರ ಕೃಪೆಗೆ ಪಾತ್ರರಾಗಬೇಕೆಂದು ಡಾ. ಗೌರಿ ವಿನಂತಿಸಿದ್ದಾರೆ.

### ಅಧಿವೇಶನದಲ್ಲಿ ಸ್ಥಳೀಯ ಸಮಸ್ಯೆಗಳ ಕುರಿತು ಗಮನ ಸೆಳೆದ ಶಾಸಕ ಡಾ. ಚಂದ್ರು ಲಮಾಣಿ

# ದುರ್ಘಟನೆಗಳು ಮರುಕಳಿಸದಿರಲಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ/ಶಿರಹಟ್ಟಿ

ವಿಧಾನಸಭಾ ಬಜೆಟ್ ಅಧಿವೇಶನದಲ್ಲಿ ಶಿರಹಟ್ಟಿ ಮತಕ್ಷೇತ್ರದ ಶಾಸಕ ಡಾ.ಚಂದ್ರು ಲಮಾಣಿ ಗುರುವಾರ ವಿವಿಧ ವಿಷಯಗಳ ಕುರಿತು ಗಮನ ಸೆಳೆದರಲ್ಲದೆ, ತಮಗೆ ದೊರೆತ ಅಲ್ಪಾವದಿಯಲ್ಲಿಯೇ ವಿವಿಧ ವಿಷಯಗಳ ಕುರಿತು ಮಾತನಾಡಿ ಸರಕಾರವನ್ನು ಒತ್ತಾಯಿಸಿದರು.

ಅಧಿವೇಶನದಲ್ಲಿ ಮಾತನಾಡಿದ ಶಾಸಕ ಡಾ. ಚಂದ್ರು ಲಮಾಣಿ, ಇದೇ ತಿಂಗಳಲ್ಲಿ ಮುಂಡರಗಿ ತಾಲೂಕಿನ ಮದಲಗಟ್ಟಿ ಬಳಿ ತುಂಗಭದ್ರಾ ನದಿಯಲ್ಲಿ ಈಜಲು ಹೋಗಿ ಮೂವರು ಯುವಕರು, 3 ತಿಂಗಳ ಹಿಂದೆ ಮಕ್ತುಂಪುರ ಗ್ರಾಮದ ವ್ಯಕ್ತಿಯೊಬ್ಬ ಕ್ಷುಲ್ಲಕ ಕಾರಣಕ್ಕಾಗಿ ತನ್ನ ಮಕ್ಕಳು ಹಾಗೂ ತನ್ನ ತಂಗಿಯ ಮಗನನ್ನು ಕೊರ್ಲಹಳ್ಳಿ ಸೇತುವೆ ಮೇಲಿಂದ ಎಸೆದು ತಾನೂ ಮೃತಪಟ್ಟ ವಿಷಯಗಳನ್ನು ಪ್ರಸ್ತಾಪಿಸಿ, ಕೊರ್ಲಹಳ್ಳಿ



ಹಾಗೂ ಹಮ್ಮಿಗಿ ಸೇತುವೆಗಳ ಬಳಿ ಈ ರೀತಿಯ ಪ್ರಕರಣಗಳು ಮರುಕಳಿಸದಂತೆ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು ಹಾಗೂ ಮೃತರ ಕುಟುಂಬಕ್ಕೆ ಸೂಕ್ತ ಪರಿಹಾರವನ್ನು ಸರಕಾರದ ವತಿಯಿಂದ ನೀಡಬೇಕೆಂದು ಒತ್ತಾಯಿಸಿದರು.

ಕ್ಷೇತ್ರದ ಸೂರಣಗಿ ಹಾಗೂ ಹೊಳೆ ಇಟಗಿ ಕೆ.ಇ.ಬಿ ಗ್ರಿಡ್‌ಗಳನ್ನು 33 ಕೆ.ವಿ.ಯಿಂದ 110 ಕೆ.ವಿ.ಯವರೆಗೆ ಅಪ್‌ಗ್ರೇಡ್ ಮಾಡುವದು, ಹೆಬ್ಬಾಳ ಗ್ರಾಮದ ಸಮೀಪದಲ್ಲಿ ಸಬ್ ಸ್ಟೇಷನ್ ಮಾಡುವುದು, ಗಂಗಾ ಕಲ್ಯಾಣ ಯೋಜನೆಯಲ್ಲಿ ರೈತರಿಗೆ ಪ್ರತ್ಯೇಕ ಟ್ರಾನ್ಸ್‌ಫಾರ್ಮರ್ ಅಳವಡಿಸಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಸಮಾಜ ಕಲ್ಯಾಣ ಇಲಾಖೆ ಅಡಿಯಲ್ಲಿ ಬರುವ SCP/TSP ಯೋಜನೆ ಅಡಿಯಲ್ಲಿ ಮೀಸಲಿಟ್ಟ ಹಣವು ನಿಗಮದ ಯೋಜನೆಗಳಿಗಷ್ಟೇ ಅಲ್ಲದೆ, ಅಭಿವೃದ್ಧಿ ಕಾಮಗಾರಿಗಳಿಗೂ ಸಾಕಾಗುತ್ತಿಲ್ಲ ಎಂಬುದರ ಕುರಿತು ಸರಕಾರದ ಗಮನ ಸೆಳೆದರು.

ಬೆಳ್ಳಟ್ಟಿ ಗ್ರಾಮದಲ್ಲಿ ಸಮುದಾಯ ಆರೋಗ್ಯ ಕೇಂದ್ರ ಹಾಗೂ ಬನ್ನಿಕೊಪ್ಪ, ಕಡಕೋಳ ಅಥವಾ ಮಜ್ಜೂರ ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ನಿರ್ಮಾಣ, ಆಶಾ ಕಾರ್ಯಕರ್ತರಿಗೆ ಪ್ರತಿ ತಿಂಗಳು 10 ಸಾವಿರ ರೂ ಸಂಭಾವನೆಯನ್ನು ನಿಗದಿಪಡಿಸುವದು, ಜಾಲವಾಡಗಿ ಏತ ನೀರಾವರಿಗೆ 197 ಕೋಟಿ ರೂಪಾಯಿ ಅನುದಾನವನ್ನು ಬಿಡುಗಡೆ ಮಾಡುವುದು, 20 ಕೆರೆಗಳನ್ನು ತುಂಬಿಸುವ ಯೋಜನೆ ಅಡಿಯಲ್ಲಿ ಕೆಲಸವನ್ನು ಮಾಡದೆ ಬಿಲ್ಲನ್ನು ಪಾವತಿಸಿದ್ದನ್ನು ಪರಿಶೀಲಿಸಲು ಶಾಸಕರು ಸಭಾಧ್ಯಕ್ಷರ ಮೂಲಕ ಸರ್ಕಾರಕ್ಕೆ ಮನವಿಯನ್ನು ಸಲ್ಲಿಸಿದರು. ಅಲ್ಲದೆ ಶುದ್ಧ ಕುಡಿಯುವ ನೀರಿನ ಘಟಕಗಳ ದುರಸ್ಥಿ ಹಾಗೂ ನಿರ್ವಹಣೆಗೆ ಕ್ರಮ ಕೈಗೊಳ್ಳಲು ಶಾಸಕ ಡಾ. ಚಂದ್ರು ಲಮಾಣಿ ಆಗ್ರಹಿಸಿದರು.

ಗ್ರಾಮೀಣಾಭಿವೃದ್ಧಿ ಇಲಾಖೆ ಅಡಿಯಲ್ಲಿ ಬರುವ ರಸ್ತೆಗಳು ಹದಗೆಟ್ಟಿದ್ದು, ಸದರಿ ರಸ್ತೆಗಳ ನಿರ್ಮಾಣ, ಪೌರಾಡಳಿತ ಇಲಾಖೆ ಅಡಿಯಲ್ಲಿ ಬರುವ ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳಿಗೆ ಯಾವುದೇ ಅನುದಾನ ಬಿಡುಗಡೆಯಾಗದಿರುವದು, ಲಕ್ಷ್ಮೇಶ್ವರ ಆಸ್ಪತ್ರೆಯನ್ನು ಆದಷ್ಟು ಶೀಘ್ರ ತಾಲೂಕು ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸುವ ಕುರಿತು ಸಂಬಂಧಿಸಿದ ಸಚಿವರನ್ನು ಆಗ್ರಹಿಸಿದರು.

ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿದ ವಿವಿಧ ಇಲಾಖೆಗಳ ಸಚಿವರು, ಈ ಕುರಿತಂತೆ ಶೀಘ್ರವೇ ಕ್ರಮ ಕೈಗೊಳ್ಳುವದಾಗಿ ಭರವಸೆ ನೀಡಿದರು.

### ಗ್ಯಾರಂಟಿ ಸಮಿತಿಯಲ್ಲಿ ಉಚಿತವಾಗಿ ಸೇವೆ ಸಲ್ಲಿಸಲು ಸಿದ್ಧ: ಕೆಆರ್‌ಎಸ್ ಜಿಲ್ಲಾಧ್ಯಕ್ಷ ವೀರನಗೌಡ ಮೂಗನೂರ

# ಸಿದ್ದರಾಮಯ್ಯನವರ ದುರಾಡಾಳಿತ ಗ್ಯಾರಂಟಿ ಯೋಜನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕೆಆರ್‌ಎಸ್ ಪಕ್ಷದ ಸದಸ್ಯರು ಯಾವುದೇ ಭತ್ಯೆ, ಗೌರವಧನ ಪಡೆಯದೇ ಗ್ಯಾರಂಟಿ ಅನುಷ್ಠಾನ ಸಮಿತಿಯಲ್ಲಿ ಸ್ವಯಂ ಸೇವಕರಾಗಿ ಕಾರ್ಯನಿರ್ವಹಿಸಲು ಸಿದ್ಧರಿದ್ದೇವೆ. ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರ್ಕಾರಕ್ಕೆ ತನ್ನ ಪಂಚ ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನ ಮಾಡಬೇಕೆಂಬ ಉದ್ದೇಶವಿದ್ದರೆ ನಮ್ಮನ್ನು ನೇಮಕ ಮಾಡಿಕೊಂಡು ಸಾರ್ವಜನಿಕರ ಹಣವನ್ನು ಉಳಿಸಲಿ. ಇಲ್ಲ ತಕ್ಷಣವೇ ಈ ಗ್ಯಾರಂಟಿ ಅನುಷ್ಠಾನ ಸಮಿತಿಗಳನ್ನು ರದ್ದುಪಡಿಸಲಿ ಎಂದು ಕೆಆರ್‌ಎಸ್ ಪಕ್ಷದ ಜಿಲ್ಲಾಧ್ಯಕ್ಷ ವೀರನಗೌಡ ಮೂಗನೂರ ಆಗ್ರಹಿಸಿದರು.

ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಜ್ಯದ ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿರುವ ಗ್ಯಾರಂಟಿಗಳನ್ನು ಸಮರ್ಪಕವಾಗಿ ಜಾರಿ ಮಾಡುವ ಕಾರಣ ನೀಡಿ ಗ್ಯಾರಂಟಿ ಅನುಷ್ಠಾನ ಸಮಿತಿಗಳನ್ನು ರಚಿಸಿದೆ. ಸರ್ಕಾರದ ನಿಯಂತ್ರಣದಲ್ಲಿ ಆಡಳಿತ ಇಲ್ಲದಿರುವುದು ಮತ್ತು ಅದನ್ನು ತನ್ನಿಂದ ನಿಯಂತ್ರಿಸಲು ಸಾಧ್ಯವಿಲ್ಲವೆಂದು ಸರ್ಕಾರವೇ




ನೇರವಾಗಿ ಹೇಳುತ್ತಿದೆ. ಗ್ಯಾರಂಟಿಗಳನ್ನು ಜಾರಿ ಮಾಡಬೇಕಾದ ಆಡಳಿತ ವ್ಯವಸ್ಥೆ ಕುಸಿದಿದೆ ಎಂದು ಸರ್ಕಾರದ ವಿರುದ್ಧ ಆಕ್ರೋಶ ಹೊರ ಹಾಕಿದರು.

ಗ್ಯಾರಂಟಿ ಸಮಿತಿಗಳಿಗೆ ಕಾಂಗ್ರೆಸ್ ಕಾರ್ಯಕರ್ತರನ್ನು ನೇಮಕ ಮಾಡಲಾಗಿದ್ದು, ಸಮಿತಿಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷರುಗಳಿಗೆ ಮಾಸಿಕ ವೇತನ ಮತ್ತು ಸದಸ್ಯರುಗಳಿಗೆ ಸಭಾ ಭತ್ಯೆ ನೀಡಲಾಗುತ್ತಿದೆ. ಇದರಿಂದ ಸರ್ಕಾರಕ್ಕೆ ಪ್ರತಿ ತಿಂಗಳು ಅಂದಾಜು 2 ಕೋಟಿ ರೂ ಹೊರೆಯಾಗುತ್ತಿದೆ. ಸರ್ಕಾರದಲ್ಲಿ ಹಣವಿಲ್ಲದೆ ಗ್ಯಾರಂಟಿ ಯೋಜನೆಗಳಿಗೆ ಹಣ ಬಿಡುಗಡೆ ಮಾಡಲಾಗುತ್ತಿಲ್ಲ. ಆದರೆ, ವಾರ್ಷಿಕವಾಗಿ 30 ಕೋಟಿ ರೂಪಾಯಿ ಹಣವನ್ನು ಸರ್ಕಾರ ವೆಚ್ಚ ಮಾಡುತ್ತಿದೆ. ಶಕ್ತಿ ಯೋಜನೆಯ ಭಾಗವಾಗಿ ಸಾರಿಗೆ ನಿಗಮಗಳಿಗೆ 900 ಕೋಟಿಗೂ ಅಧಿಕ ಹಣ ಪಾವತಿಸಬೇಕಿದೆ. ಇನ್ನೂ ಎರಡು ತಿಂಗಳ ಗೃಹಲಕ್ಷ್ಮೀ ಹಣ ತಲುಪಿಲ್ಲ. ಆದರೂ ಕಾಂಗ್ರೆಸ್ ಕಾರ್ಯಕರ್ತರ ಓಲೈಕೆಗೆ ಹಣ ವೆಚ್ಚ ಮಾಡಲಾಗುತ್ತಿದೆ ಎಂದು ಕಿಡಿ ಕಾರಿದರು. ಗ್ಯಾರಂಟಿ ಅನುಷ್ಠಾನ ಸಮಿತಿಗಳನ್ನು ಮುಂದುವರೆಸುವುದಾಗಿ ಮತ್ತು ಮುಂದೆಯೂ ಅದು ಇರತ್ತೆದೆಯೆಂದು ಅವರು ಹೇಳಿದ್ದಾರೆ. ಇಷ್ಟು ನಿರ್ಲಜ್ಜೆಯಿಂದ ದುರಾಡಳಿತವನ್ನು ಸಮರ್ಥಿಸಿಕೊಂಡಿರುವುದು ಸಮಂಜಸವಲ್ಲ ಎಂದು ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ರಾಜ್ಯದ ಕೆರೆ ಅಭಿವೃದ್ಧಿಗಾಗಿ ಒಂದೆರಡು ಕೋಟಿಯ ಯೋಜನೆಗಳಿಗೆ ಹಣ ಇಲ್ಲವೆಂದು ಸರ್ಕಾರ ಪ್ರಸ್ತಾವನೆಗಳನ್ನು ತಿರಸ್ಕರಿಸಿದೆ. ವಿದ್ಯಾರ್ಥಿ ವೇತನ ನೀಡಲು ಹಣವಿಲ್ಲ. ಆದರೆ, ಕಾಂಗ್ರೆಸ್ ಕಾರ್ಯಕರ್ತರಿಗೆ ನೀಡಲು ಹಣ ಇದೆ. ಇದು ಸಿದ್ದರಾಮಯ್ಯನವರ ದುರಾಡಾಳಿತ ಗ್ಯಾರಂಟಿ ಯೋಜನೆಯಾಗಿದೆ. ಸರ್ಕಾರದ ಆಡಳಿತ ಯಂತ್ರ ಸುಸ್ಥಿಯಲ್ಲಿದೆ. ಶಾಸಕರು ತಮ್ಮ ಕರ್ತವ್ಯವನ್ನು ಸೂಕ್ತವಾಗಿ ನಿಭಾಯಿಸಿದರೆ ಈ ಸಮಿತಿಗಳ ಅಗತ್ಯವೇ ಇರುವುದಿಲ್ಲ. ಮುಖ್ಯಮಂತ್ರಿಗಳು ವಿಧಾನಸಭೆಯಲ್ಲಿ ನೀಡಿರುವ ಹೇಳಿಕೆಯು ಸರ್ಕಾರಕ್ಕೆ ತನ್ನ ಆಡಳಿತವನ್ನು ಸುಸ್ಥಿತಿಗೆ ತರುವ ಯಾವ ಆಸಕ್ತಿಯೂ ಇಲ್ಲ ಎಂದು ತೋರಿಸುತ್ತದೆ ಎಂದು ವೀರನಗೌಡ ಮೂಗನೂರ ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಪಾರೂಕ್ ಕಟ್ಟಿಮನಿ, ದೇವೆಂದ್ರ ಬಿ.ಎಲ್, ಬಸವರಾಜ ಅರಗಂಜಿ, ರೇಣುಕಾ ನಾಗಾವಿ, ಸುರೇಶ ಮುಳಗುಂದ ಉಪಸ್ಥಿತರಿದ್ದರು.

## ಮೇಕೆದಾಟು ಯೋಜನೆಗಾಗಿ ಪಾದಯಾತ್ರೆ




■ ವಿಜಯಸಾಕ್ಷಿ ಸುದ್ದಿ, ಗದಗ

ಮೇಕೆದಾಟು ಯೋಜನೆ ಹಾಗೂ ಮಹಾದಾಯಿ ಯೋಜನೆ ಜಾರಿಗೊಳಿಸುವಂತೆ ಆಗ್ರಹಿಸಿ ಮಾ.21ರಂದು ಕರ್ನಾಟಕ ರಕ್ಷಣಾ ವೇದಿಕೆಯ ಪ್ರವೀಣ ಶೆಟ್ಟಿ ಬಣದಿಂದ ರಾಮನಗರ ಜಿಲ್ಲೆಯಿಂದ ಬೃಹತ್ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ ಎಂದು ಕರವೇ ಜಿಲ್ಲಾಧ್ಯಕ್ಷ ವೆಂಕಟೇಶ ಬೇಲೂರ ಹೇಳಿದರು. ನಗರದ ಪತ್ರಿಕಾಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯುನ್ನುದ್ದೇಶಿಸಿ ಮಾತನಾಡಿ, ಕನಕಪುರ ತಾಲೂಕಿನ ಮೇಕೆದಾಟು ಬಳಿ ಕಾವೇರಿ ನದಿಗೆ ಅಡ್ಡಲಾಗಿ ನಿರ್ಮಿಸಲು ಉದ್ದೇಶಿಸಿರುವ ಮೇಕೆದಾಟು ಆಣೆಕಟ್ಟು ಯೋಜನೆ ಜಾರಿಗೊಳಿಸಲು ಆಗ್ರಹಿಸಿ ರಾಮನಗರದ ಕೆಂಪೇಗೌಡ ವೃತ್ತದಿಂದ ಸಾವಿರಾರು ಕಾರ್ಯಕರ್ತರ ಸಮ್ಮುಖದಲ್ಲಿ ಪಾದಯಾತ್ರೆ ಕೈಗೊಂಡು, ಯೋಜನೆ ಜಾರಿಗೆ ಆಗ್ರಹಿಸಿ ಹಕ್ಕೊತ್ತಾಯ ಮಾಡಲಾಗುತ್ತದೆ ಎಂದರು.

ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ವಿಧಾನಸಭಾ ಚುನಾವಣೆಗೂ ಮುಂಚೆ ಯೋಜನೆ ಜಾರಿಗಾಗಿ ಮೇಕೆದಾಟುವಿನಿಂದ ಬೆಂಗಳೂರಿನವರಿಗೆ ಪಾದಯಾತ್ರೆ ಮಾಡಿದ್ದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಹಲವು ಕಾಂಗ್ರೆಸ್ ನಾಯಕರು ಪಾದಯಾತ್ರೆಯಲ್ಲಿ ಭಾಗಿಯಾಗಿದ್ದರು. ನಂತರ ಅವರದೇ ಪಕ್ಷದ ಸರಕಾರ ಅಧಿಕಾರಕ್ಕೆ ಬಂದು ಎರಡು ವರ್ಷವಾದರೂ ಇದುವರೆಗೂ ಯೋಜನೆ ಜಾರಿ ಮಾಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ರಾಜ್ಯ ಕಮಿಟಿ ಹಾಗೂ ಸರ್ವ ಜಿಲ್ಲಾ ಘಟಕದಿಂದ ಕಾರ್ಯಕರ್ತರು ಪಾದಯಾತ್ರೆಯಲ್ಲಿ ಭಾಗವಹಿಸಿಲಿದ್ದಾರೆ. ಜಿಲ್ಲೆಯಿಂದ ಸುಮಾರು 300 ಜನ ಕಾರ್ಯಕರ್ತರು ಭಾಗವಹಿಸುತ್ತಾರೆ. ಮಾ.22ರಂದು ವಿಧಾನಸಭೆ ಚಲೋ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು. ಪತ್ರಿಕಾಗೋಷ್ಠಿಯಲ್ಲಿ ಮಂಜುನಾಥ, ಪರಶುರಾಮ, ದಾವಲಸಾಬ ಮುಳಗುಂದ, ಶ್ರೀನಿವಾಸ ಭಂಡಾರಿ, ತಿಮ್ಮಣ್ಣ ಡೋಣಿ, ಮಂಜುನಾಥ, ಸಹದೇವ, ಹನುಮಂತ ಸೇರಿದಂತೆ ಇತತರು ಇದ್ದರು.

### ಜಿಲ್ಲಾ ಮಟ್ಟದ ಪ.ಜಾ–ಪ.ಪಂ ಜಿಲ್ಲಾ ಜಾಗೃತ ದೌರ್ಜನ್ಯ ನಿಯಂತ್ರಣ ಸಮಿತಿ ಸಭೆ

# ಸೌಲಭ್ಯ ಒದಗಿಸುವಲ್ಲಿ ವಿಳಂಬ ಬೇಡ

■ ವಿಜಯಸಾಕ್ಷಿ ಸುದ್ದಿ, ಗದಗ

ಅರ್ಹ ಪರಿಶಿಷ್ಟ ಜಾತಿ/ ಪಂಗಡದ ಫಲಾನುಭವಿಗಳಿಗೆ ಸರ್ಕಾರದಿಂದ ಸಿಗುವ ಸೌಲಭ್ಯಗಳನ್ನು ಒದಗಿಸುವಲ್ಲಿ ವಿಳಂಬ ಮಾಡಬಾರದು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜಿಲ್ಲಾ ಮಟ್ಟದ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದ ಜಿಲ್ಲಾ ಜಾಗೃತ ದೌರ್ಜನ್ಯ ನಿಯಂತ್ರಣ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ತಾಲೂಕು ಮಟ್ಟದಲ್ಲಿಯೂ ಸಹ ಪ.ಜಾ/ ಪ.ಪಂ ದೌರ್ಜನ್ಯ ನಿಯಂತ್ರಣ ಸಭೆಗಳು ನಿಯಮಿತವಾಗಿ ಜರುಗಬೇಕು. ಪ.ಜಾ/ಪ.ಪಂ ಸಮುದಾಯದವರ ದೌರ್ಜನ್ಯ ಪ್ರತಿಬಂಧಕ ಕಾಯ್ದೆಗಳ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯಾಗಾರಗಳನ್ನು ಹಮ್ಮಿಕೊಳ್ಳಬೇಕು. ಪ.ಜಾ/ಪ.ಪಂ ದೌರ್ಜನ್ಯ ಪ್ರಕರಣದಡಿ ಅರ್ಹ



ಸಂತ್ರಸ್ಥರಿಗೆ ಪರಿಹಾರಧನ ಒದಗಿಸುವಲ್ಲಿ ವಿಳಂಬ ಮಾಡದೇ ಸೂಕ್ತ ಕ್ರಮ ಕೈಗೊಳ್ಳಬೇಕು. ವಸತಿ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಮೂಲಭೂತ ಸೌಕರ್ಯಗಳ ಕೊರತೆಯಾಗದಂತೆ ನಿಗಾ ವಹಿಸಬೇಕು. ವಸತಿ ಶಾಲೆಗಳಲ್ಲಿನ ವಿದ್ಯಾರ್ಥಿಗಳಿಗೆ ಗುಣಮಟ್ಟದ ಆಹಾರ ಹಾಗೂ ಮೌಲ್ಯಯುತ ಶಿಕ್ಷಣ ಒದಗಿಸುವಂತೆ ಕ್ರಮ ವಹಿಸಬೇಕು ಎಂದು ಸೂಚಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ ಮಾತನಾಡಿ, ಜಿಲ್ಲೆಯ 35 ಗ್ರಾಮಗಳಲ್ಲಿ ಪ.ಜಾ ಮತ್ತು ಪ.ಪಂಗಡದ ಸಮುದಾಯದವರಿಗೆ ದೌರ್ಜನ್ಯ ಪ್ರತಿಬಂಧಕ ಕಾಯ್ದೆಗಳ ಕುರಿತು ಅರಿವು ಮೂಡಿಸುವ ಕಾರ್ಯಾಗಾರಗಳನ್ನು ಹಮ್ಮಿಕೊಳ್ಳಲಾಗಿದೆ. ಇಲಾಖೆಗೆ ಸಂಬಂಧಿಸಿದ ಯೋಜನೆಗಳ ಮತ್ತು ದೌರ್ಜನ್ಯ ಪ್ರತಿಬಂಧಕ ಕಾಯ್ದೆಗಳ ಬಗ್ಗೆ ಅರಿವು ಮೂಡಿಸುವ ಕರಪತ್ರ ಹಂಚಲಾಗಿದೆ ಎಂದು ಸಭೆಗೆ ತಿಳಿಸಿದರು.

ಇದೇ ಸಂದರ್ಭದಲ್ಲಿ ದೌರ್ಜನ್ಯದಲ್ಲಿ ಮೃತಪಟ್ಟ ಹದ್ಲಿ ಗ್ರಾಮದ ಮರಿಯಪ್ಪ ಯಮನಪ್ಪ ಮಾದರ ಇವರ ಅವಲಂಬಿತರಾದ ಅವರ ಪತ್ನಿ ರೇಣವ್ವ ಮಾದರ ಅವರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಆದೇಶದ ಪತ್ರವನ್ನು ಜಿಲ್ಲಾಧಿಕಾರಿಗಳು ವಿತರಿಸಿದರು.

ಈ ಸಂದರ್ಭದಲ್ಲಿ ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಶರೀಫ್ ಬಿಳೆಯಲಿ, ಸುರೇಶ ನಡುವಿನಮನಿ, ವಿನಾಯಕ ಬಳ್ಳಾರಿ, ಶ್ರೀನಿವಾಸ ದ್ಯಾವನೂರ ಸೇರಿದಂತೆ ವಿವಿಧ ನಾಮನಿರ್ದೇಶಿತ ಸದಸ್ಯರು, ವಿವಿಧ ಇಲಾಖೆಯ ಅಧಿಕಾರಿಗಳು, ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರು ಹಾಜರಿದ್ದರು.

# ಅಕ್ರಮವಾಗಿ ಹಾಲಿನ ಪೌಡರ್ ಸಾಗಾಟ: ಸಿಕ್ಕಿ ಬಿದ್ದ ಖದೀಮರು!



■ವಿಜಯಸಾಕ್ಷಿ ಸುದ್ದಿ, ಗದಗ

ಅಕ್ರಮವಾಗಿ ಸಾಗಾಟ ಮಾಡುತ್ತಿದ್ದ ಕ್ಷೀರಭಾಗ್ಯ ಯೋಜನೆಯ ಹಾಲಿನ ಪೌಡರ್ ಪ್ಯಾಕೆಟ್ ಗಳನ್ನು ಗೂಡ್ಸ್ ವಾಹನ ಸಮೇತ ಪೊಲೀಸರು ವಶಕ್ಕೆ ಪಡೆದಿರುವ ಘಟನೆ ಗದಗ ಜಿಲ್ಲೆಯ ಬೆಟಗೇರಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಜರುಗಿದೆ.

ಘಟನೆ ಸಂಬಂಧ ವಿಜಯಪುರ ಜಿಲ್ಲೆಯ ಇಂಡಿ ತಾಲೂಕಿನ ಡ್ರೈವರ್ ಸಂತೋಷ ದೌಲತ್ ರಾವ್ ಶಿಂಧೆ ಹಾಗೂ ಬೆಟಗೇರಿಯ ಬಣ್ಣದ ನಗರ ನಿವಾಸಿ ಖಾಜಾಹುಸೇನ್ ತಂದೆ ರಾಯಸಾಬ್ ಖಾದರನ್ನವರ್ ಎಂಬುವವರನ್ನು ಪೊಲೀಸರು ಅರೆಸ್ಟ್ ಮಾಡಿದ್ದಾರೆ.

ಆರೋಪಿಗಳು ಅಂಗನವಾಡಿ ಹಾಗೂ ಶಾಲೆಗಳಿಗೆ ಪೂರೈಕೆ ಮಾಡಿದ್ದ ಕೆ.ಎಮ್.ಎಫ್ ನಿಂದ ಸಾಗಾಟವಾಗಿರುವ ನಂದಿನಿ ಬ್ರಾಂಡ್ ನ ಹಾಲಿನ ಪೌಡರ್ ಪ್ಯಾಕೆಟ್ ಗಳನ್ನು ಕಡಿಮೆ ಬೆಲೆಗೆ ಖರೀದಿಸಿ ಹೆಚ್ಚಿನ ಹಣಕ್ಕೆ ಮಾರಾಟ ಮಾಡುವ ಉದ್ದೇಶದಿಂದ ಕಳೆದ ಹಲವು ದಿನಗಳಿಂದ ಈ ದಂಧೆ ನಡೆಸುತ್ತಿದ್ದರು ಎನ್ನಲಾಗಿದೆ.

ಗುರುವಾರ ಬೆಳಿಗ್ಗೆ ಗದಗ ನಗರದಿಂದ ಮಹಾರಾಷ್ಟ್ರಕ್ಕೆ ಅಕ್ರಮವಾಗಿ ಕ್ಷೀರಭಾಗ್ಯ ಯೋಜನೆಯ ಹಾಲಿನ ಪೌಡರ್ ಸಾಗಿಸುತ್ತಿದ್ದಾಗ ಖಚಿತ ಮಾಹಿತಿ ಮೇರೆಗೆ ಬೆಟಗೇರಿ ಪೊಲೀಸರು, ಶಿಕ್ಷಣ ಇಲಾಖೆ ಜೊತೆ ಜಂಟಿ ಕಾರ್ಯಾಚರಣೆ ನಡೆಸಿ ಅಕ್ರಮ ಹಾಲಿನ ಪೌಡರ್ ವಶಕ್ಕೆ ಪಡೆದಿದ್ದಾರೆ.

ಬಂಧಿತರಿಂದ 1 ಲಕ್ಷ 12 ಸಾವಿರ ಮೌಲ್ಯದ 313 ಕೆಜಿ ಹಾಲಿನ ಪುಡಿ ಹಾಗೂ ಮಿನಿ ಲಾರಿಯನ್ನು ಸೀಜ್ ಮಾಡಲಾಗಿದೆ. ಘಟನೆ ಕುರಿತು ಬೆಟಗೇರಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಬೆಟಗೇರಿ ಠಾಣಾ ಪಿಎಸ್ಐ ಲಕ್ಷ್ಮಣ್ಣ ಆರಿ ಹಾಗೂ ಸಿಬ್ಬಂದಿ ಇದ್ದರು.

### ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ಮಹಿಳಾ ಘಟಕದಿಂದ ಮಹಿಳಾ ದಿನಾಚರಣೆ

# ನಿಮ್ಮ ಮಕ್ಕಳನ್ನು ವಿದ್ಯಾವಂತರನ್ನಾಗಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮನೆಯೇ ಮೊದಲ ಪಾಠಶಾಲೆ-ತಾಯಿಯೇ ಮೊದಲ ಗುರು ಎನ್ನುವಂತೆ ಪುರುಷರಿಗಿಂತಲೂ ಮಹಿಳೆಯರಿಗೆ ಹೆಚ್ಚಿನ ಜವಾಬ್ದಾರಿ ಮತ್ತು ಪಾತ್ರವಿದೆ. ಸಮಾಜದ ಕಣ್ಣಾಗಿರುವ ಮಹಿಳೆಯರು ತಮ್ಮ ಜವಾಬ್ದಾರಿಯನ್ನು ನಿರ್ವಹಿಸಬೇಕಿದೆ ಎಂದು ನಿವೃತ್ತ ಶಿಕ್ಷಕಿ ಶಿವಲೀಲಾ ಅಂಗಡಿ ಅಭಿಪ್ರಾಯಪಟ್ಟರು.

ಅವರು ತಾಲೂಕಾ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ಮಹಿಳಾ ಘಟಕದಿಂದ ಹಮ್ಮಿಕೊಳ್ಳಲಾಗಿದ್ದ ಮಹಿಳಾ ದಿನಾಚರಣೆ ಮತ್ತು ಸನ್ಮಾನ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿ ಮಾತನಾಡಿದರು.

ಮಗಳು, ಪತ್ನಿ, ತಾಯಿ, ಸ್ನೇಹಿತೆ, ಮಾರ್ಗದರ್ಶಿಯಾಗಿ ಮಹಿಳೆ ಸಮಾಜದ ಕಣ್ಣಾಗಿ ಕಾರ್ಯನಿರ್ವಹಿಸುತ್ತಾಳೆ. ಮಹಿಳೆಯರು ಮೊದಲು ತಮ್ಮ ತಮ್ಮ ಮಕ್ಕಳನ್ನು ವಿದ್ಯಾವಂತರನ್ನಾಗಿ ಮಾಡುವದ ಜೊತೆಗೆ ನಮ್ಮ ಸಂಸ್ಕಾರ, ಸಂಸ್ಕೃತಿಯನ್ನು ಪರಿಚಯ ಮಾಡಿಕೊಡಿ. ಅವುಗಳನ್ನು ಅಳವಡಿಸಿಕೊಂಡಲ್ಲಿ ಜೀವನದಲ್ಲಿ ಎಲ್ಲವನ್ನೂ ಸಾಧಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಹಿರಿಯರಾದ ಗಿರಿಜಾ ಮುದಗಲ್ ಮಾತನಾಡಿ, ಬದಲಾಗುತ್ತಿರುವ 21ನೇ ಶತಮಾನದಲ್ಲಿರುವ ನಾವು ಇನ್ನೂ ಮಹಿಳೆಯರ ದಿನಾಚರಣೆ ಆಚರಿಸುತ್ತಿರುವುದು ಎಷ್ಟು ಸೂಕ್ತ, ಪ್ರತಿದಿನವೂ ಮಹಿಳೆಯರ ದಿನವಾಗಿದೆ. ಸಿಪಾಯಿ ಕೆಲಸದಿಂದ ಹಿಡಿದು ಉನ್ನತ ಹುದ್ದೆಗಳನ್ನು ನಿರ್ವಹಿಸುವದು, ಗ್ರಾ.ಪಂ ಸದಸ್ಯೆಯಾಗುವದರಿಂದ ಹಿಡಿದು ರಾಷ್ಟ್ರಪತಿಯಂತಹ ಉನ್ನತ ಹುದ್ದೆಯನ್ನು ನಿಭಾಯಿಸುವ ಸಾಮರ್ಥ್ಯ ಇರುವದು ಹೆಣ್ಣಿನಲ್ಲಿ. ಪ್ರತಿಯೊಂದು ರಂಗದಲ್ಲಿಯೂ ತನ್ನ ಛಾಪು ಹೊಂದಿರುವ ಮಹಿಳೆಯು ಈ ಜಗತ್ತಿನ ಶ್ರೇಷ್ಠತೆಯ ಸಂಕೇತವಾಗಿದ್ದಾಳೆ ಎಂದು ಹೇಳಿದರು.




ಇದೇ ಸಂದರ್ಭದಲ್ಲಿ ಕಾರ್ಯನಿರತ ಪತ್ರಕರ್ತರ ಸಂಘದಿಂದ 'ಜಿ.ನಾರಾಯಣಸ್ವಾಮಿ ಪ್ರಶಸ್ತಿ'ಗೆ ಭಾಜನರಾದ ದಿಗಂಬರ ಪೂಜಾರ ಅವರನ್ನು ಸಂಘದ ವತಿಯಿಂದ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಮಹಿಳೆಯರು, ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು, ವಿವಿಧ ಆಟೋಟಗಳು ನಡೆದವು. ಮಹಿಳಾ ಘಟಕದ ಸಂಸ್ಥಾಪಕಿ, ನಿವೃತ್ತ ಶಿಕ್ಷಕಿ ಶಕುಂತಲಾ ಹೊರಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿ, ಸಂಘ ನಡೆದು ಬಂದ ದಾರಿಯನ್ನು ವಿವರಿಸಿದರು. ಸಭೆಯಲ್ಲಿ ಉಪಾಧ್ಯಕ್ಷೆ ಲಕ್ಷ್ಮವ್ವ ಆಚಾರಿ, ಸುವರ್ಣಬಾಯಿ ಬಹದ್ದೂರದೇಸಾಯಿ, ರೋಹಿಣಿಬಾಯಿ ಬಹದ್ದೂರದೇಸಾಯಿ ಮುಂತಾದವರಿದ್ದರು.

ಗುರುಬಾಯಿ ಹುಲಸೂರ, ಹೇಮಾ ಬಾಳಿಕಾಯಿ, ಅಂಬಿಕಾ ಪಟ್ಟಣಶೆಟ್ಟಿ ಮತ್ತಿತರರು ಮಾತನಾಡಿದರು. ಅನ್ನಪೂರ್ಣ ಬೊಮ್ಮನಹಳ್ಳಿ ಪ್ರಾರ್ಥಿಸಿದರು, ಶೈಲಾ ಆದಿ ಸ್ವಾಗತಿಸಿದರು. ಪೂರ್ಣಿಮಾ ಪಾಟೀಲ ಮತ್ತು ಪೂರ್ಣಿಮಾ ಬಳಿಗಾರ ಪರಿಚಯಿಸಿದರು. ವಿದ್ಯಾ ಮಹಾಂತಶೆಟ್ಟರ, ಅನ್ನಪೂರ್ಣ ಸಾತಣ್ಣವರ, ಗಿರಿಜಕ್ಕ ಹತ್ತಿಕಾಳ, ಸುನಂದಾ ಆಚಾರಿ, ಕಾವ್ಯಾ ದೇಸಾಯಿ, ಸೇರಿದಂತೆ ಅನೇಕರು ಹಾಜರಿದ್ದರು. ನಿವೃತ್ತ ಶಿಕ್ಷಕಿ ಜಯಶ್ರೀ ಮೆಳ್ಳಿಗೇರಿ ಕಾರ್ಯಕ್ರಮ ನಿರೂಪಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಾಲೂಕಾ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ಮಹಿಳಾ ಘಟಕದ ಅಧ್ಯಕ್ಷೆ ಶಾರದಾ ಮಹಾಂತಶೆಟ್ಟರ ಮಾತನಾಡಿ, ಮಹಿಳೆ ಕೇವಲ ಗೃಹಿಣಿಯಾಗಿ ತನ್ನ ಪಾಲಿನ ಕೆಲಸ ಇಷ್ಟೇ ಎಂದುಕೊಳ್ಳಬಾರದು. ಅದರ ಹೊರತಾಗಿ ತನಗೂ ಸಾಮಾಜಿಕ ಜವಾಬ್ದಾರಿಗಳಿವೆ ಎಂದರಿತು ಸಮಾಜಕ್ಕೆ ತನ್ನದೇ ಆದ ಕೊಡುಗೆ ನೀಡುವ ಮನಸ್ಥಿತಿ ಹೊಂದಬೇಕು. ಮಕ್ಕಳಿಗೆ ಪ್ರೇರಣೆ ಮತ್ತು ಸ್ಫೂರ್ತಿಯಾಗಿ ಉತ್ತಮ, ಶಿಕ್ಷಣ, ಸಂಸ್ಕಾರ ನೀಡಬೇಕು ಎಂದರು.

# ಹಾವೇರಿಯಲ್ಲಿ ಮಳೆಗೆ ಮನೆ ಮೇಲೆ ಉರುಳಿ ಬಿದ್ದ ತೆಂಗಿನಮರ!

■ವಿಜಯಸಾಕ್ಷಿ ಸುದ್ದಿ, ಹಾವೇರಿ

ಹಾವೇರಿಯಲ್ಲಿ ಮೊದಲ ಮಳೆಗೆ ವರುಣಾಘಾತ ಎದುರಾಗಿದೆ. ಮನೆ ಮೇಲೆ ದಿಢೀರನೆ ತೆಂಗಿನಮರ ಉರುಳಿ ಬಿದ್ದ ಘಟನೆ ಜಿಲ್ಲೆಯ ಹಾನಗಲ್ ತಾಲೂಕಿನ ಹೇರೂರು ಗ್ರಾಮದಲ್ಲಿ ಜರುಗಿದೆ.

ಚಂದ್ರಪ್ಪ ಶಿವಪ್ಪ ನಿಂಬನಗೌಡ್ರ ಎಂಬುವವರ ಮನೆ ಮೇಲೆ ಮರ ಉರುಳಿ ಬಿದ್ದ ಹಿನ್ನೆಲೆಯಲ್ಲಿ ಮನೆ ಮೇಲ್ಛಾವಣಿ ಕುಸಿತಗೊಂಡಿದೆ. ಅದೃಷ್ಟವಶಾತ್ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ ಎನ್ನಲಾಗಿದೆ. ಮಾಹಿತಿ ಮೇರೆಗೆ ಸ್ಥಳೀಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಿದರು.

# 'ಪೋಷಣ್ ಪಕ್ವಾಡ' ಕಾರ್ಯಕ್ರಮ ಉದ್ಘಾಟನೆ

■ವಿಜಯಸಾಕ್ಷಿ ಸುದ್ದಿ, ನರಗುಂದ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಗದಗ ಹಾಗೂ ಶಿಶು ಅಭಿವೃದ್ಧಿ ಯೋಜನೆ ನರಗುಂದ ಇವರ ಸಹಯೋಗದಲ್ಲಿ ರಾಷ್ಟ್ರೀಯ ಪೋಷಣ್ ಅಭಿಯಾನ ಯೋಜನೆಯಡಿ 'ಪೋಷಣ್ ಪಕ್ವಾಡ' ಕಾರ್ಯಕ್ರಮದ ಉದ್ಘಾಟನಾ ಕಾರ್ಯಕ್ರಮ ಶಿರೋಳ ಗ್ರಾಮದಲ್ಲಿ ಜರಗಿತು.

ಶಿರೋಳ ಗ್ರಾ.ಪಂ ಸದಸ್ಯರಾದ ಕೌಸರಬಾನು ಮುಲ್ಲಾ ಉದ್ಘಾಟಿಸಿದರು. ಕಾರ್ಯಕ್ರಮದ ಕುರಿತು ಪೋಷಣ್ ಅಭಿಯಾನ ಕಾರ್ಯಕ್ರಮ ಸಂಯೋಜಕರಾದ ಮಂಜುನಾಥ ಗುಗ್ಗರಿ ಮಾತನಾಡಿ, ಪೋಷಣ್ ಪಕ್ವಾಡವು 15 ದಿನಗಳ ಕಾಲ ಜರುಗುವ ಕಾರ್ಯಕ್ರಮವಾಗಿದ್ದು,




ಈ ವರ್ಷ ವಿಶೇಷವಾಗಿ ಮೊದಲ 1000 ದಿನಗಳ ಆರೈಕೆ, ಮಕ್ಕಳಲ್ಲಿ ಆರೋಗ್ಯಕರ ಜೀವನ ಶೈಲಿ ಹಾಗೂ ಪೋಷಣ್ ಟ್ರ್ಯಾಕರ್ ಆ್ಯಪ್‌ನಲ್ಲಿ ಫಲಾನುಭವಿಗಳ ಸ್ವಯಂ ನೋಂದಣಿ ಬಗ್ಗೆ ಮಹತ್ವ ನೀಡಲಾಗುವುದು ಎಂದರು.

ಮೇಲ್ವಿಚಾರಕಿ ಪರಿಮಳ ಹೂಗಾರ ಮಾತನಾಡಿ, ಅಂಗನವಾಡಿಗಳ ಮೂಲಕ ಸುಸ್ಥಿರ ಆಹಾರ ವ್ಯವಸ್ಥೆ, ರಕ್ತಹೀನತೆ ಮತ್ತು ಆರೋಗ್ಯಕರ ಜೀವನಶೈಲಿ ಬಗ್ಗೆ ಅರಿವು ಮೂಡಿಸುತ್ತಿರುವುದು ಸ್ವಾಗತಾರ್ಹ ಎಂದರು.

ಕಾರ್ಯಕ್ರಮದಲ್ಲಿ ಪಂಚಾಯತ ಅಭಿವೃದ್ಧಿ ಅಧಿಕಾರಿ ವಾಯ್.ಬಿ. ಸಂಕನಗೌಡ್ರ ಮಾತನಾಡಿ, ಆರೋಗ್ಯವಂತ ಸಮಾಜದ ನಿರ್ಮಾಣಕ್ಕೆ ಪೌಷ್ಠಿಕಾಂಶವೇ ಬುನಾದಿಯಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಅಂಗನವಾಡಿ ಕಾರ್ಯಕರ್ತೆಯರಾದ ಎಸ್.ಜಿ. ಬಾಗಲಕೋಟ, ಎಸ್.ವಿ. ಜಿಗಳೂರ, ಎಸ್.ವಿ. ಪಾಟೀಲ, ಎಸ್.ಜಿ. ಕುಪ್ಪಸ್ತ, ವಿ.ಎಸ್. ಹಂಚಿನಮನಿ, ಎಮ್.ವಾಯ್. ಬನ್ನಿಗಿಡದ, ಎಸ್.ವಿ. ಕುಪ್ಪಸ್ತ, ಎನ್.ಎಮ್. ಕಣಕೇರಿ, ಎಸ್.ಎಮ್. ಕಿತ್ತಲಿ, ಆಚ್.ಎಸ್. ಮಂಟೂರಮ್ಮಠ, ವಿ.ಎಸ್. ಗಿರಿಯಪ್ಪಗೌಡ್ರ, ಜಿ.ಎಲ್. ಮರ್ಚಣ್ಣವರ ಸೇರಿದಂತೆ ಸಹಾಯಕಿಯರು, ತಾಯಂದಿರು, ಮಕ್ಕಳು ಭಾಗವಹಿಸಿದ್ದರು.

### ನಾಲ್ವಾಡಗಲ್ಲಿಯ ಕಾಮರತಿ ಉತ್ಸವಕ್ಕೆ ಶತಮಾನೋತ್ಸವದ ಸಂಭ್ರಮ

# ಜನಮನ ಸೆಳೆದ ರಸಮಂಜರಿ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ನಾಲ್ವಾಡಗಲ್ಲಿಯ ಕಾಮರತಿ ಉತ್ಸವದ ಶತಮಾನೋತ್ಸವದ ಸಂಭ್ರಮದ ಪ್ರಯುಕ್ತ ಏರ್ಪಡಿಸಿದ್ದ ಸಾಂಸ್ಕೃತಿಕ ರಸಮಂಜರಿ ಕಾರ್ಯಕ್ರಮ ಜನಮನ ಸೆಳೆಯುವಲ್ಲಿ ಯಶಸ್ವಿಯಾಯಿತು.

ಭವ್ಯ ರಂಗಸಜ್ಜಿಕೆಯಲ್ಲಿ ಕೊಪ್ಪಳದ ಶ್ರೀ ಅಭಿನವ ಇವೆಂಟ್ಸ್‌ನ ಭಾಷಾ ಹಿರೇಮನಿ, ಗಾಯಕಿಯ ಧ್ವನಿಯಲ್ಲಿ ಗದುಗಿನ ಯುವ ಪ್ರತಿಭೆ ಖಾಜೇಸಾಬ ಬೂದಿಹಾಳ, ಬೆಂಗಳೂರಿನ ಗಾಯಕಿ ಅಶ್ವಿನಿ ಭಾಸ್ಕರ್, ನವಲಗುಂದದ ಗಾಯಕಿ ಸಲ್ಮಾ, ಮಂಜುನಾಥ ಆಗೋಲಿ ಅವರಿಂದ ಕಾಮಿಡಿ, ಜಾನಪದ ಕಲಾವಿದ ಮಂಜುನಾಥ ಹಿರೇಮಠ ಮುಂತಾದವರು ಪ್ರಸ್ತುತಪಡಿಸಿದ ರಸಮಂಜರಿ ಕಾರ್ಯಕ್ರಮ ಜನಮನ ಸೆಳೆಯಿತು. ಶಿವಯೋಗಿ ಟೆಂಗಿನಕಾಯಿ ಸ್ವಾಗತಿಸಿ ವಂದಿಸಿದರು.





ಕಾರ್ಯಕ್ರಮದಲ್ಲಿ ದ್ರಾಕ್ಷಾಯಿಣಿ ಭದ್ರಕಾಳಮ್ಮನಮಠ, ಪಾರ್ವತಿ ಪಟ್ಟಣಶೆಟ್ಟಿ, ಲೀಲಾವತಿ ಟೆಂಗಿನಕಾಯಿ, ಮಹಾದೇವಿ ಜಿನಗಾ, ವಿಜಯಲಕ್ಷ್ಮೀ ಪರ್ವತಗೌಡ್ರ, ಸುವರ್ಣಾ ಹೊಸಂಗಡಿ, ಪ್ರೇಮಾ ದುಂದೂರ, ಗೀತಾ ನಾಲ್ವಾಡ, ಶೋಭಾ ವಾಲಿ, ವೀಣಾ ನಾಲ್ವಾಡ, ಬಸವಣ್ಣೆವ್ವ ಅಮರಗಟ್ಟಿ, ಉಮಾ ನಾಲ್ವಾಡ, ಮಂಜುಳಾ ಲಕ್ಕುಂಡಿ, ಪರವ್ವ ಅಣ್ಣಿಗೇರಿ, ರೇಖಾ ಲಕ್ಕುಂಡಿ, ಕವಿತಾ ಹುಳ್ಳಿಗೌಡ್ರ, ಕಸ್ತೂರಿ ಹರ್ತಿ, ಕವಿತಾ ಅಬ್ಬಿಗೇರಿಮಠ, ದ್ರಾಕ್ಷಾಯಣಿ ಹರ್ತಿ, ರತ್ನಕ್ಕ ಟೆಂಗಿನಕಾಯಿ ಗಂಗಾ ಟೆಂಗಿನಕಾಯಿ, ಅಪೇಕ್ಷಾ ಲಕ್ಕುಂಡಿ, ಸ್ನೇಹಾ ಜಿನಗಾ, ವಿದ್ಯಾ ಲಕ್ಕುಂಡಿ, ರಾಣಿ ಬೇಂದ್ರೆ, ಚೈತ್ರಾ ಜಿನಗಾ, ಉಮಾ ಬೇವೂರ, ಮಧುಶ್ರೀ ಭದ್ರಕಾಳಮ್ಮನಮಠ, ಶಾಂತಕ್ಕ ಕಟ್ಟಿಮನಿ, ವಿಜಕ್ಕ ಗೌಡ್ರ, ಶಾರದಾ ಕಪ್ಪತ್ತನವರ, ಶೃತಿ ಲಕ್ಕುಂಡಿ, ಸಂಜು ಟೆಂಗಿನಕಾಯಿ, ಸುವರ್ಣ ಲಕ್ಕುಂಡಿ, ಅವ್ವಕ್ಕ ದುಂದೂರ, ನೇತ್ರಾ ಚೆನ್ನವೀರಶೆಟ್ಟರ, ಅಶ್ವಿನಿ ಚವಡಿ ಮುಂತಾದವರು ಉಪಸ್ಥಿತರಿದ್ದರು.

### NIMA, ವಿವಿಧ ಸಂಘ-ಸಂಸ್ಥೆಗಳ ಸಹಯೋಗದಲ್ಲಿ ಆಯೋಜನೆ

# ಬೃಹತ್ ರಕ್ತದಾನ ಶಿಬಿರ ಮಾ.23ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಅಮರ ಭಗತ್ ಸಿಂಗ್, ರಾಜಗುರು, ಸುಖದೇವ್ ಇವರ ಬಲಿದಾನ ದಿನದ ಅಂಗವಾಗಿ ನ್ಯಾಷನಲ್ ಇಂಟಿಗ್ರೇಟೆಡ್ ಮೆಡಿಕಲ್ ಅಸೋಸಿಯೇಷನ್ (NIMA) ಗದಗ ಜಿಲ್ಲಾ ಘಟಕ, ನ್ಯಾಷನಲ್ ಇಂಟಿಗ್ರೇಟೆಡ್ ಫೋರಮ್ ಆಫ್ ಆರ್ಟಿಸ್ಟ್ ಅಂಡ್ ಆಕ್ಟಿವಿಸ್ಟ್ಸ್ (NIFAA), ಇಂಡಿಯನ್ ರೆಡ್ ಕ್ರಾಸ್ ಸೊಸೈಟಿ ಗದಗ, ರಾಜೀವ ಗಾಂಧಿ ಆಯುರ್ವೇದಿಕ್ ಮೆಡಿಕಲ್ ಕಾಲೇಜು ರೋಣ, ಡಾ. ಎಸ್.ವಿ. ತೋಟಗಂಟಿಮಠ ಗ್ರೂಪ್ ಆಫ್ ಇನ್ಸ್ಟಿಟ್ಯೂಟ್ಸ್ ಗದಗ, ಅಂಬಿಕಾ ರಕ್ತ ಭಂಡಾರ ಗದಗ ಇವರ ಸಹಯೋಗದಲ್ಲಿ ಸಂವೇದನ-2 ಅಂತಾರಾಷ್ಟ್ರೀಯ ರಕ್ತದಾನ ಜಾಗೃತಿ ಶಿಬಿರವನ್ನು ಮಾರ್ಚ್ 23ರಂದು ಜಿಲ್ಲಾ



ಕ್ರೀಡಾಂಗಣ ಹತ್ತಿರದ ಇಂಡಿಯನ್ ರೆಡ್ ಕ್ರಾಸ್ ಸೊಸೈಟಿಯಲ್ಲಿ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ಆಯೋಜಿಸಲಾಗಿದೆ.

ಈ ಶಿಬಿರದಲ್ಲಿ ಓಖಓಂ ಗೌರವಾಧ್ಯಕ್ಷರಾದ ಡಾ. ಎಸ್.ಆರ್. ಹಿರೇಮಠ, ರಾಜ್ಯ ವಕ್ತಾರರಾದ ಡಾ. ವಿರೇಶ ಅಂಗಡಿ, ಕಾರ್ಯದರ್ಶಿ ಡಾ. ಬಸವರಾಜ ಚನ್ನಪ್ಪಗೌಡರ, ಖಜಾಂಚಿ ಡಾ. ಗಿರೀಶ ಬಡಿಗೇರ, ರೋಣ ಆಯುರ್ವೇದ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ಐ.ಬಿ. ಕೊಟ್ಟೂರಶೆಟ್ಟಿ, ಡಾ. ಎಸ್.ವಿ. ತೋಟಗಂಟಿಮಠ ಗ್ರೂಪ್ ಆಫ್ ಇನ್ಸ್ಟಿಟ್ಯೂಟ್ಸ್‌ನ ಚೇರಮನ್ ಡಾ. ಸಂತೋಷ ತೋಟಗಂಟಿಮಠ, ರೆಡ್ ಕ್ರಾಸ್ ಸೊಸೈಟಿಯ ಕಾರ್ಯದರ್ಶಿ ಡಾ. ಅಶ್ರಫ್ ಸಾಮುದ್ರಿ, ಡಾ. ಗೋಡಬೋಲೆ, ನಿವೃತ್ತ ಪ್ರಾಚಾರ್ಯರಾದ ಡಾ. ಜಿ.ಬಿ. ಪಾಟೀಲ, ಡಾ. ಯು.ವಿ. ಪುರದ, ಅಂಬಿಕಾ ರಕ್ತ ಭಂಡಾರದ ಆರ್.ವಿ. ಚವ್ಹಾಣ, ಓಖಓಂ ಪದಾಧಿಕಾರಿಗಳು ಹಾಗೂ ಸರ್ವ ಸದಸ್ಯರು ಭಾಗವಹಿಸಲಿದ್ದಾರೆ.

ಸ್ವಯಂ ಪ್ರೇರಿತವಾಗಿ ರಕ್ತದಾನ ಮಾಡಲಿಚ್ಛಿಸುವವರು ಡಾ. ಜಯಕುಮಾರ ಬ್ಯಾಳಿ-9986711023, ಡಾ. ಬಸವರಾಜ ಚನ್ನಪ್ಪಗೌಡರ- 9900192627, ಡಾ. ಗಿರೀಶ ಬಡಿಗೇರ -97428 42134 ಇವರನ್ನು ಸಂಪರ್ಕಿಸಬೇಕೆಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಬಲಿದಾನ ದಿನದ ನಿಮಿತ್ತ ಮಾರ್ಚ್ 21ರಿಂದ ಮಾರ್ಚ್ 23ರವರೆಗೆ ಸಂವೇದನಾ-2 ಶಿಬಿರದ ಮೂಲಕ ದೇಶದಾದ್ಯಂತ 2400 ಸ್ಥಳಗಳಲ್ಲಿ 1.5 ಲಕ್ಷ ಬ್ಲಡ್ ಯೂನಿಟ್‌ಗಳನ್ನು ಸಂಗ್ರಹಿಸುವ ಮಹತ್ವಾಕಾಂಕ್ಷೆಯನ್ನು ಹೊಂದಲಾಗಿದೆ. ಈ ಮೂಲಕ ತನ್ನ ಹಳೆಯ ವಿಶ್ವ ದಾಖಲೆ ಮುರಿದು ಹೊಸ ದಾಖಲೆ ಸ್ಥಾಪಿಸಲು ಪ್ರಯತ್ನಿಸಲಾಗುತ್ತಿದೆ ಎಂದು ಓಖಓಂ ಗದಗ ಜಿಲ್ಲಾ ಘಟಕದ ಅಧ್ಯಕ್ಷರಾದ ಡಾ. ಜಯಕುಮಾರ ಬ್ಯಾಳಿ ತಿಳಿಸಿದ್ದಾರೆ.

# ಪ್ರಶಸ್ತಿಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯದಲ್ಲಿ ಸುಸ್ಥಿರ ಕೃಷಿ ಅಭಿವೃದ್ಧಿಗಾಗಿ ಸಮಗ್ರ ಕೃಷಿ ಪದ್ಧತಿಯನ್ನು ಉತ್ತೇಜಿಸಲು ರೈತರಿಗೆ ಪ್ರಶಸ್ತಿಯನ್ನು ನೀಡಲಾಗುತ್ತಿದೆ. ಈ ನಿಟ್ಟಿನಲ್ಲಿ ವಾರ್ಷಿಕವಾಗಿ ದಕ್ಷಿಣ, ಉತ್ತರ, ಕರಾವಳಿ ಮತ್ತು ಮಲೆನಾಡು ಪ್ರದೇಶದ ಸಮಗ್ರ ಕೃಷಿ ಪದ್ಧತಿಯನ್ನು ಅಳವಡಿಸಿಕೊಂಡ ರೈತರಿಂದ ತಲಾ ಮೂರು ಪ್ರಶಸ್ತಿಗಳನ್ನು ನೀಡಲು ಉದ್ದೇಶಿಸಲಾಗಿದೆ.

ಪ್ರತಿ ಪ್ರಶಸ್ತಿಯು ರೂ.25000 ಮತ್ತು ಅತ್ಯುತ್ತಮ ಸಮಗ್ರ ಕೃಷಿ ಪದ್ಧತಿಯನ್ನು ಅಳವಡಿಸಿಕೊಂಡ ರೈತರಿಗೆ ಪ್ರಶಸ್ತಿ ಪತ್ರವನ್ನು ಒಳಗೊಂಡಿರುತ್ತದೆ. ಪ್ರಶಸ್ತಿ ಪುರಸ್ಕೃತರು ತಮ್ಮ ಪ್ರದೇಶದಲ್ಲಿ ರೈತರಿಗೆ ಸ್ಫೂರ್ತಿ ಮತ್ತು ಶಿಕ್ಷಣ ನೀಡುವ ಸಂಪನ್ಮೂಲ ರೈತರಾಗಿ ಸೇವೆ ಸಲ್ಲಿಸಿರಬೇಕು. ಆಯ್ಕೆಯಾದ ರೈತರಿಗೆ ಬೆಂಗಳೂರಿನಲ್ಲಿ ನಡೆಯುವ ವಿಶೇಷ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು. ನಂತರದಲ್ಲಿ ಸಮಗ್ರ ಕೃಷಿ ಪದ್ಧತಿ ಕುರಿತು ಒಂದು ದಿನದ ಕಾರ್ಯಾಗಾರವನ್ನು ಆಯೋಜಿಸಲಾಗುವುದು.

ರೈತರು ತಮ್ಮ ಅರ್ಜಿಯನ್ನು ನೇರವಾಗಿ ಕಾರ್ಯದರ್ಶಿ, ಆಲುಮ್ನಿ ಅಸೋಸಿಯೇಷನ್, ಯು.ಎ.ಎಸ್.ಕನ್ವೆನ್ಷನ್ ಸೆಂಟರ್, ಹೆಬ್ಬಾಳ, ಬೆಂಗಳೂರು-560024 ಇಲ್ಲಿಗೆ ಸಲ್ಲಿಸಬಹುದು. ಆಲುಮ್ನಿ ಅಸೋಸಿಯೇಷನ್, ಯು.ಎ.ಎಸ್. ಬೆಂಗಳೂರು ಇವರಿಂದ ಸ್ಥಾಪಿತವಾದ ಯಾವುದೇ ಪ್ರಶಸ್ತಿ ಅಥವಾ ತತ್ಸಮಾನ ಹಾಗೂ ಹೆಚ್ಚಿನ ಪ್ರಶಸ್ತಿಯನ್ನು ಪಡೆದ ರೈತರು ಅರ್ಜಿ ಸಲ್ಲಿಸಲು ಬರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ನಿಮ್ಮ ಹೋಬಳಿಯ ರೈತ ಸಂಪರ್ಕ ಕೇಂದ್ರ ಮತ್ತು ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದಾಗಿದೆ.

### ನಂದೀಶ್ವರ ನಗರದ ನಾಗರಿಕರ ಸಂಘ ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ

# ನಂದೀಶ್ವರ ನಗರದ ಸಮಗ್ರ ಅಭಿವೃದ್ಧಿಗೆ ಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ನಂದೀಶ್ವರ ನಗರದ ನಿವಾಸಿಗಳ ಬೇಡಿಕೆಗಳನ್ನು ಈಡೇರಿಸುವ ಮೂಲಕ ಈ ನಗರ ಸರ್ವಾಂಗ ಸುಂದರವಾಗಿ ರೂಪುಗೊಳ್ಳಲು ಅಧಿಕಾರಿಗಳಿಗೆ ಸೂಚನೆ ನೀಡಿ ಕ್ರಮ ಜರುಗಿಸುವದಾಗಿ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಅವರು ನಂದೀಶ್ವರ ನಗರದ 2 ಮತ್ತು 3ನೇ ಕ್ರಾಸ್ (ಇಂಡೋರ್ ಸ್ಟೇಡಿಯಂ ಬಡಾವಣೆಯ) ನಾಗರಿಕರ ವಿವಿಧೋದ್ದೇಶಗಳ ಸಂಘವನ್ನು ಉದ್ಘಾಟಿಸಿ ಮಾತನಾಡಿದರು.

ಸುಶಿಕ್ಷಿತರೂ, ಪ್ರಜ್ಞಾವಂತರೂ ನೆಲೆಸಿರುವ ನಂದೀಶ್ವರ ನಗರವನ್ನು ಅಭಿವೃದ್ಧಿಪಡಿಸಿ ಮಾದರಿ ನಗರವನ್ನಾಗಿಸಲು ನಾವೆಲ್ಲರೂ ಸೇರಿ ಕೆಲಸ ಮಾಡೋಣ. ಜೊತೆಗೆ ಇಂಡೋರ್ ಸ್ಟೇಡಿಯಂನ ಮೆರಗನ್ನು ಹೆಚ್ಚಿಸಲು ಶ್ರಮಿಸೋಣ ಎಂದರು.

ನಂದೀಶ್ವರ ನಗರದ 3ನೇ ಕ್ರಾಸ್‌ನ ರಸ್ತೆ ಬಹಳಷ್ಟು ಹಾಳಾಗಿದ್ದು, ತೆಗ್ಗು-ದಿಣ್ಣೆಗಳಿಂದಾಗಿ ವಾಹನ, ಜನ ಸಂಚರಿಸಲು ಬಾರದಂತಾಗಿದೆ. ಈ ರಸ್ತೆಯನ್ನು ತ್ವರಿತವಾಗಿ ಸಿಮೆಂಟ್ ರಸ್ತೆಯನ್ನಾಗಿ ಮಾಡಬೇಕು, ನಂದೀಶ್ವರ ನಗರಕ್ಕೆ ಒಂದು ಸುಂದರವಾದ ಉದ್ಯಾನವ ನಿರ್ಮಿಸಬೇಕು, ಶಾಲೆ ಹಾಗೂ ದೇವಸ್ಥಾನ ಇರುವ ವಸತಿ ಪ್ರದೇಶದಲ್ಲಿ ಬಾರ್ ಆ್ಯಂಡ್ ರೆಸ್ಟೋರೆಂಟ್ ಆರಂಭವಾಗಿದ್ದು, ಇದನ್ನು ಬೇರೆಡೆ ಸ್ಥಳಾಂತರಿಸಲು ಅಗತ್ಯ ಕ್ರಮ ಜರುಗಿಸಬೇಕೆಂದು ಸಂಘವು ಸಚಿವರಿಗೆ ಮನವಿ ಸಲ್ಲಿಸಿತು.



ಸಮಾರಂಭದ ಅಧ್ಯಕ್ಷತೆಯನ್ನು ಸಂಘದ ಅಧ್ಯಕ್ಷ ವಿಶ್ವನಾಥರೆಡ್ಡಿ ಗದ್ದಿಕೇರಿ ವಹಿಸಿದ್ದರು. ಸಂಘದ ಗೌರವ ಅಧ್ಯಕ್ಷ ಜಿ.ಎಸ್. ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ಜೆ.ವ್ಹಿ. ಹಿರೇಮಠ ಸ್ವಾಗತಿಸಿದರು, ಗೌರವ ಕಾರ್ಯದರ್ಶಿ ಬಸವರಾಜ ಎಚ್.ಕೊರ್ಲಹಳ್ಳಿ ನಿರೂಪಿಸಿದರು. ಕೊನೆಗೆ ವ್ಹಿ.ಎಸ್. ಶಿವಕಾಳಿಮಠ ವಂದಿಸಿದರು.

ವೇದಿಕೆಯ ಮೇಲೆ ನಗರಸಭಾ ಸದಸ್ಯೆ ವಿದ್ಯಾವತಿ ಗಡಗಿ, ಮಾಜಿ ಸದಸ್ಯ ಅನಿಲ ಗರಗ, ಜಿ.ಪಂ ಮಾಜಿ ಸದಸ್ಯ ಸಿದ್ದಲಿಂಗೇಶ ಪಾಟೀಲ ಉಪಸ್ಥಿತರಿದ್ದರು. ಸಮಾರಂಭದಲ್ಲಿ ಮಹೇಶ ರಂಗಣ್ಣವರ, ದೇವಪ್ಪ ನಡವಲಗುಡ್ಡ, ಶಿವಾನಂದ ಪಲ್ಲೇದ, ಜೆ.ವ್ಹಿ. ಹಿರೇಮಠ, ಆರ್.ವ್ಹಿ. ಕರವೀರಮಠ, ಡಾ. ಈರಣ್ಣ ಹಳೆಮನಿ, ಕೆ.ವ್ಹಿ. ಯಾಳಗಿಶೆಟ್ರು, ನೀಲಕಂಠಯ್ಯ ಕಳ್ಳಿಮಠ, ಅಶೋಕ ಮಾಳೆಕೊಪ್ಪ, ಡಾ. ಕೃಷ್ಣಾ ನಾವಳ್ಳಿ, ವ್ಹಿ.ವ್ಹಿ. ಕವಲೂರ, ಲಿಂಗರಾಜ ಗೊಲ್ಲರ, ಡಾ.ರವೀಂದ್ರ ನಂದಿ, ಎಸ್.ಜಿ. ಪಲ್ಲೇದ, ಸುಭಾಸ ಗಡಾದ, ವ್ಹಿ.ಎಸ್. ಶಿವಕಾಳಿಮಠ, ಮಂಜುನಾಥ ಗಜಕೋಶ, ಡಿ.ಬಿ. ಚೆನ್ನಶೆಟ್ಟರ ಸೇರಿದಂತೆ ಬಡಾವಣೆಯ ನಿವಾಸಿಗಳು ಪಾಲ್ಗೊಂಡಿದ್ದರು.

ಮನವಿ ಸ್ವೀಕರಿಸಿದ ಸಚಿವರು, ಬಡಾವಣೆಯ ಸೌಕರ್ಯಗಳ ಬೇಡಿಕೆಗಳ ಕುರಿತು ಸಂಬಂಧಿಸಿದವರಿಗೆ ಸೂಚನೆ ನೀಡಿ ತುರ್ತು ಕ್ರಮ ಜರುಗಿಸುವ ಭರವಸೆ ನೀಡಿದರಲ್ಲದೆ ಸುಂದರ ಉದ್ಯಾನವನ ನಿರ್ಮಾಣಕ್ಕೆ ತಿಂಗಳೊಳಗೆ ಕ್ರಮ ಕೈಗೊಳ್ಳುವದಾಗಿ ಹೇಳಿದರು.

# ಬೆರಳಚ್ಚು ಪರೀಕ್ಷೆಗಳ ಫಲಿತಾಂಶ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಳಿ ಬೆಂಗಳೂರು ಇವರು 2025ರ ಜನವರಿಯಲ್ಲಿ ನಡೆಸಿದ ಬೆರಳಚ್ಚು ವಾರ್ಷಿಕ ಪರೀಕ್ಷೆಯ ಫಲಿತಾಂಶದಲ್ಲಿ ನಗರದ ಶ್ರೀ ಕಲ್ಮೇಶ್ವರ ಬೆರಳಚ್ಚು ಮತ್ತು ಕಂಪ್ಯೂಟರ್ ವಿದ್ಯಾಲಯವು ಶೇ. 91.5 ಫಲಿತಾಂಶ ಪಡೆದಿದೆ.

ಇಂಗ್ಲೀಷ್ ಬೆರಳಚ್ಚು ಸೀನಿಯರ್ ವಿಭಾಗದಲ್ಲಿ ಜಯಂತಿ ನೀಲಗಾರ ಶೇ. 86.50, ಇಂಗ್ಲೀಷ್ ಬೆರಳಚ್ಚು ಜ್ಯೂನಿಯರ್ ವಿಭಾಗದಲ್ಲಿ ಸುನೀಲ (ಶೆಟ್ಟಿ) ಶೇ.90.50 ಮತ್ತು ಗೌರಿ ಶಿಲ್ಪಿ ಶೇ.89.50 ಅಂಕ ಗಳಿಸಿದ್ದಾರೆ.

ಕನ್ನಡ ಬೆರಳಚ್ಚು ಸೀನಿಯರ್ ವಿಭಾಗದಲ್ಲಿ ಕವಿತಾ ದೊಡ್ಡಮನಿ ಶೇ.75.50, ಕನ್ನಡ ಬೆರಳಚ್ಚು ಜ್ಯೂನಿಯರ್ ವಿಭಾಗದಲ್ಲಿ ಮುಸ್ಕಾನ ಗ.ಮುಲ್ಲಾ ಶೇ.88.0 ಮತ್ತು ಗೌರಿ ಶಿಲ್ಪಿ ಶೇ.86.50 ಅಂಕ ಪಡೆದಿದ್ದಾರೆ. ಉಳಿದಂತೆ ಪ್ರಥಮ ಸ್ಥಾನದಲ್ಲಿ 17 ವಿದ್ಯಾರ್ಥಿಗಳು, ದ್ವಿತೀಯ ಸ್ಥಾನದಲ್ಲಿ 24 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.

ಸಾಧಕ ವಿದ್ಯಾರ್ಥಿಗಳಿಗೆ ವಿದ್ಯಾಲಯದ ಮಾಲೀಕರು/ಪ್ರಾಚಾರ್ಯರಾದ ತಯಬಅಲಿ ಅ. ಹೊಂಬಳ ಅಭಿನಂದಿಸಿದ್ದಾರೆ.

### ಎಸ್‌ಎಸ್‌ಎಲ್‌ಸಿ ಪರೀಕ್ಷಾ ಕೇಂದ್ರಗಳ ಸಿದ್ಧತೆ ಪರಿಶೀಲಿಸಿದ ಹಿರಿಯ ಅಧಿಕಾರಿಗಳು

# ಪಾರದರ್ಶಕ ಪರೀಕ್ಷೆಗೆ ಅಗತ್ಯ ತಯಾರಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಾರ್ಚ್ 21ರಿಂದ ಏಪ್ರಿಲ್ 4ರವರೆಗೆ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು ನಡೆಯಲಿರುವ ಹಿನ್ನೆಲೆಯಲ್ಲಿ ಗುರುವಾರ ತಾಲೂಕಿನ ಎಲ್ಲ ಪರೀಕ್ಷಾ ಕೇಂದ್ರಗಳಲ್ಲಿ ಕೈಗೊಂಡಿರುವ ಅಗತ್ಯ ಸಿದ್ಧತೆಗಳನ್ನು ತಹಸೀಲ್ದಾರ, ಬಿಇಓ ಸೇರಿದಂತೆ ಎಲ್ಲ ಹಿರಿಯ ಅಧಿಕಾರಿಗಳು ಪರಿಶೀಲಿಸಿದರು.

ಲಕ್ಷ್ಮೇಶ್ವರ ತಾಲೂಕಿನಲ್ಲಿ 14 ಸರಕಾರಿ, 8 ಅನುದಾನಿತ, 11 ಅನುದಾನರಹಿತ ಸೇರಿದಂತೆ ಒಟ್ಟು 33 ಪ್ರೌಢಶಾಲೆಗಳಿವೆ.

ತಾಲೂಕಿನಲ್ಲಿ ಲಕ್ಷ್ಮೇಶ್ವರದ ಪುರಸಭೆ ಉರ್ದು ವಿದ್ಯಾಲಯ, ಪಿಎಸ್‌ಬಿಡಿ ಬಾಲಕಿಯರ ಪ್ರೌಢಶಾಲೆ, ಬಿಸಿಎನ್ ಕನ್ನಡ ಮಾಧ್ಯಮ ಪ್ರೌಢಶಾಲೆ, ಸರ್ಕಾರಿ ಪ್ರೌಢಶಾಲೆ ಪುಟಗಾಂವ್‌ಬಡ್ನಿ, ಎಸ್‌ಎಸ್‌ಕೆ ಪ್ರೌಢಶಾಲೆ ಶಿಗ್ಲಿ ಹಾಗೂ ಸರ್ಕಾರಿ ಪ್ರೌಢಶಾಲೆ ಬಾಲೆಹೊಸೂರು ಹೀಗೆ ಒಟ್ಟು 6 ಪರೀಕ್ಷಾ ಕೇಂದ್ರಗಳನ್ನು ತೆರೆಯಲಾಗಿದೆ.

ಲಕ್ಷ್ಮೇಶ್ವರ ತಾಲೂಕಿನ ಒಟ್ಟು 33 ಪ್ರೌಢಶಾಲೆಗಳಿಂದ ಸುಮಾರು 1591 ವಿದ್ಯಾರ್ಥಿಗಳು ಪ್ರಥಮ ಬಾರಿಗೆ ಹಾಗೂ ಬಾಹ್ಯ ವಿದ್ಯಾರ್ಥಿಗಳು, ಖಾಸಗಿ ಬಾಹ್ಯ ವಿದ್ಯಾರ್ಥಿಗಳು ಸೇರಿದಂತೆ ಒಟ್ಟು 1630 ವಿದ್ಯಾರ್ಥಿಗಳು ವಿವಿಧ ಕೇಂದ್ರದಲ್ಲಿ ಕನ್ನಡ, ಇಂಗ್ಲೀಷ್ ಮತ್ತು ಉರ್ದು ಮಾಧ್ಯಮದಲ್ಲಿ ಪರೀಕ್ಷೆ ಬರೆಯಲಿದ್ದಾರೆ.



ಈ ಬಾರಿಯ ಎಸ್‌ಎಸ್‌ಎಲ್‌ಸಿ ಪರೀಕ್ಷೆಯನ್ನು ಅತಿ ಎಚ್ಚರಿಕೆಯಿಂದ ಹಾಗೂ ಜಾಗರೂಕತೆಯಿಂದ ನಿರ್ವಹಿಸುವ ನಿಟ್ಟಿನಲ್ಲಿ ಅನೇಕ ಸಿಬ್ಬಂದಿಗಳನ್ನು ನೇಮಿಸಲಾಗಿದ್ದು, ಅದರಲ್ಲಿ ಪರೀಕ್ಷಾ ಕೇಂದ್ರಗಳಿಗೆ ಅಧೀಕ್ಷರಾಗಿ 6, ಕಸ್ಟೋಡಿಯನ್ 6, ಸ್ಥಾನಿಕ ಜಾಗೃತದಳ 6, ಮಾರ್ಗಾಧಿಕಾರಿ 3, ಮೊಬೈಲ್ ಸ್ವಾಧೀನಾಧಿಕಾರಿಗಳು 6, ಕೊಠಡಿ ಮೇಲ್ವಿಚಾರಕರು 115, ಆರೋಗ್ಯ ಇಲಾಖೆ ಸಿಬ್ಬಂದಿಗಳು 12, ಪೊಲೀಸ್ ಸಿಬ್ಬಂದಿಗಳು 12 ಸೇರಿದಂತೆ 166 ಪರೀಕ್ಷಾ ಸಿಬ್ಬಂದಿಗಳು ಕಾರ್ಯ ನಿರ್ವಹಿಸಲಿದ್ದಾರೆ. ಲಕ್ಷ್ಮೇಶ್ವರ ತಾಲೂಕಿನಲ್ಲಿ 3 ಪರೀಕ್ಷಾ ಕೇಂದ್ರಗಳನ್ನು 1 ಕ್ಲಸ್ಟರ್ ಮಾಡಲಾಗಿದೆ.

### ಭಯ ಬಿಟ್ಟು ಪರೀಕ್ಷೆ ಎದುರಿಸಿ

ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳನ್ನು ಅತ್ಯಂತ ಸುಗಮ, ಸರಳ, ಪಾರದರ್ಶಕವಾಗಿ ನಡೆಸಿ ಯಶಸ್ವಿಯಾಗಿಸಲು ಎಲ್ಲ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ. ವಿದ್ಯಾರ್ಥಿಗಳು ಆತ್ಮಸ್ಥೈರ್ಯದಿಂದ ಪರೀಕ್ಷೆ ಎದುರಿಸಲು ಶಿಕ್ಷಕರು ಸಾಕಷ್ಟು ಶ್ರಮವಹಿಸಿ ಸಿದ್ಧರನ್ನಾಗಿಸಿದ್ದಾರೆ. ಆಯಾ ಪರೀಕ್ಷಾ ಕೇಂದ್ರಗಳಿಗೆ ತೆರಳಲು ಪ್ರವೇಶ ಪತ್ರ ತೋರಿಸಿ ಪರೀಕ್ಷಾರ್ಥಿಗಳು ಬಸ್‌ನಲ್ಲಿ ಉಚಿತವಾಗಿ ಪ್ರಯಾಣಿಸಬಹುದು. ಪರೀಕ್ಷಾ ಕೇಂದ್ರದಲ್ಲಿ ವದಂತಿಗಳಿಗೆ ಕಿವಿಗೊಡದಿರಿ. ನಿಮ್ಮ ಪರೀಕ್ಷೆಯಲ್ಲಿ ಉತ್ತಮ ಅಂಕಗಳನ್ನು ಗಳಿಸುವ ಗುರಿಯೊಂದಿಗೆ ಸಾಗಿ. ಯಾವುದೇ ಆತಂಕ ಬೇಡ.

**– ಎಚ್. ನಾಣಕಿ ನಾಯ್ಕ್.**
**ಕ್ಷೇತ್ರ ಶಿಕ್ಷಣಾಧಿಕಾರಿ.**

# ಮಹಿಳೆಯ ಸಾಧನೆಗೆ ಪ್ರೋತ್ಸಾಹ ಅಗತ್ಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಅಕ್ಕಮಹಾದೇವಿ ದೇವಸ್ಥಾನದಲ್ಲಿ ತಾಲೂಕು ಶರಣ ಸಾಹಿತ್ಯ ಪರಿಷತ್ತು, ತಾಲೂಕು ಕದಳಿ ಮಹಿಳಾ ವೇದಿಕೆ ಇವರ ಆಶ್ರಯದಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನ ಆಚರಿಸಲಾಯಿತು. ಡಾ. ರಂಜಿತಾ ಎನ್.ಮಲ್ಲಾಡದ ಮಾತನಾಡಿ, ಇಂದು ಎಲ್ಲ ಕ್ಷೇತ್ರಗಳಲ್ಲೂ ಮಹಿಳೆ ತನ್ನ ಹೆಜ್ಜೆ ಮೂಡಿಸುತ್ತಿದ್ದಾಳೆ. ತೊಟ್ಟಿಲು ತೂಗುವ ಕೈ ದೇಶವನ್ನೇ ಆಳಬಲ್ಲದು ಎಂಬುದಕ್ಕೆ ಇಂದಿನ ಮಹಿಳೆಯರು ಸಾಕ್ಷಿಯಾಗಿದ್ದಾರೆ. ಆದರೆ ಆಕೆ ಸಾಧನೆ ಮಾಡಲು ಪ್ರೋತ್ಸಾಹ ಅಗತ್ಯ. ಕುಟುಂಬದ ಸದಸ್ಯರು ಅವಳಿಗೆ ಆಸರೆಯಾಗಿ ನಿಂತರೆ ಯಾವುದೇ ಕೆಲಸವನ್ನಾದರೂ ಮಹಿಳೆ ಮಾಡಬಲ್ಲಳು ಎಂದರು.



ಇಂದುಮತಿ ಎಸ್.ಪಿಳ್ಳಿ ಅಧ್ಯಕ್ಷತೆ ವಹಿಸಿದ್ದರು. ಆರುಂಧತಿ ಎಸ್.ಬಳಿಗಾರ ಕಾರ್ಯಕ್ರಮ ಉದ್ಘಾಟಿಸಿದರು. ಮೈತ್ರಾದೇವಿ ಹಿರೇಮಠ ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಕಿತ್ತೂರು ರಾಣಿ ಚನ್ನಮ್ಮ ಪ್ರಶಸ್ತಿ ಪುರಸ್ಕೃತರಾದ ಲಲಿತಕ್ಕ ಕೆರಿಮನಿ ಅವರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ನಿರ್ಮಲಾ ಅರಳಿ, ಸರೋಜಕ್ಕ ಬನ್ನೂರ, ಶಾರದಾ ಬಟಗುರ್ಕಿ, ಕಾಂಚನಾ ಹಸರೆಡ್ಡಿ, ಅರುಂಧತಿ ಬಿಂಕದಕಟ್ಟಿ, ಚಿತ್ರಾ ಹಣಗಿ, ಅಂಕಿತಾ ಅರಳಿ, ಅನ್ನಕ್ಕ ಯಾಳಗಿ, ಮಂಜುಳಾ ಓದುನವರ, ಕುಸುಮಾ ಮಲ್ಲಾಡದ, ಸುಲೋಚನ ಜವಾಯಿ, ರೂಪಾ ಕಳ್ಳಿಗುಡ್ಡ, ವಿಜಯಲಕ್ಷ್ಮೀ ಪಿಳ್ಳಿ, ಮಂಜುಳಾ ಪಿಳ್ಳಿ, ಪ್ರತಿಮಾ ಮಹಾಜನಶೆಟ್ಟ, ಕವಿತಾ ಅರಳಹಳ್ಳಿ, ಪಾರ್ವತಿ ಕಳ್ಳಿಮಠ ಮತ್ತಿತರರು ಇದ್ದರು. ಎಚ್.ಡಿ. ನಿಂಗರೆಡ್ಡಿ ಸ್ವಾಗತಿಸಿದರು. ಡಿ.ಎಫ್. ಪಾಟೀಲ ನಿರೂಪಿಸಿದರು. ನೀಲಾ ಕುಂಬಿ ವಂದಿಸಿದರು.

# ಗ್ರಾಮೀಣ ಜನರಲ್ಲಿ ಓದಿನ ಆಸಕ್ತಿ ಮೂಡಿಸಲು ಪ್ರಯತ್ನಿಸಿ

■ವಿಜಯಸಾಕ್ಷಿ ಸುದ್ದಿ, ಡಂಬಳ

ಗ್ರಂಥಾಲಯಗಳು ಗ್ರಾಮೀಣ ಪ್ರದೇಶದಲ್ಲಿ ಮಹತ್ವದ ಪಾತ್ರ ವಹಿಸುತ್ತವೆ. ಗ್ರಾಮೀಣ ಭಾಗದ ಯುವಜನರ ಜ್ಞಾನ ದಾಹದ ಬುಗ್ಗೆಯಾಗಿ ಕೆಲಸ ಮಾಡುವ ನಿಟ್ಟಿನಲ್ಲಿ ಗ್ರಂಥಾಲಯಗಳು ನೆರವಾಗುತ್ತಿವೆ ಎಂದು ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ವಿಶ್ವನಾಥ ಹೊಸಮನಿ ಅಭಿಪ್ರಾಯಪಟ್ಟರು.

ತಾಲೂಕಿನ ವಿವಿಧ ಗ್ರಾ.ಪಂ ವ್ಯಾಪ್ತಿಯ ಅರಿವು ಕೇಂದ್ರಗಳ ಮೇಲ್ವಿಚಾರಕರು ಪಟ್ಟಣದ ತಾಲೂಕು ಪಂಚಾಯಿತಿ ಸಾಮರ್ಥ್ಯ ಸೌಧದಲ್ಲಿ ಹಮ್ಮಿಕೊಂಡಿದ್ದ ಮಂಥನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.




ಇತ್ತೀಚಿನ ದಿನಗಳಲ್ಲಿ ಗ್ರಾಮೀಣ ಭಾಗಗಳ ಗ್ರಂಥಾಲಯಗಳು ಸಮರ್ಪಕವಾಗಿ ಕಾರ್ಯ ನಿರ್ವಹಿಸುತ್ತಿದ್ದು, ಗ್ರಾಮಸ್ಥರ ಮೆಚ್ಚುಗೆಗೆ ಪಾತ್ರವಾಗಿವೆ. ಅಲ್ಲಿರುವ ಕಾರ್ಯಕರ್ತರು ಗ್ರಾಮೀಣ ಜನರಲ್ಲಿ ಓದಿನ ಆಸಕ್ತಿ ಮೂಡಿಸಲು ಪ್ರಯತ್ನಿಸಬೇಕು. ಆ ಮೂಲಕ ಅವರ ಜ್ಞಾನವನ್ನು ಹೆಚ್ಚಿಸಬೇಕು ಎಂದು ಸಲಹೆ ನೀಡಿದರು.

ಈಗಿರುವ ವಿವಿಧ ಸೌಲಭ್ಯಗಳ ಜೊತೆಗೆ ಗ್ರಾಮೀಣ ಗ್ರಂಥಾಲಯಗಳಿಗೆ ಇನ್ನೂ ಹೆಚ್ಚಿನ ಅಗತ್ಯ ಸೌಲಭ್ಯ ಹಾಗೂ ಸೌಕರ್ಯಗಳನ್ನು ಒದಗಿಸಬೇಕು ಎಂದು ಅರಿವು ಕೇಂದ್ರದ ಮೇಲ್ವಿಚಾರಕರು ಮನವಿ ಮಾಡಿಕೊಂಡರು.

ತಾಲೂಕಿನ ವಿವಿಧ ಗ್ರಾಮಗಳ ಅರಿವು ಕೇಂದ್ರಗಳ ಮೇಲ್ವಿಚಾರಕರು ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ವಿಶ್ವನಾಥ ಹೊಸಮನಿ ಹಾಗೂ ಯೋಜನಾಧಿಕಾರಿ ವಿಜಯಕುಮಾರ ಬೆಣ್ಣೆ ಅವರನ್ನು ಸನ್ಮಾನಿಸಿದರು.

ತಾ.ಪಂ ವ್ಯವಸ್ಥಾಪಕ ಫಕ್ರುದ್ದಿನ್ ನದಾಫ್, ಸಹಾಯಕ ನಿರ್ದೇಶಕ ಪ್ರವೀಣ ಗೋಣೆಮ್ಮನವರ, ಗ್ರಂಥಾಲಯ ಮೇಲ್ವಿಚಾರಕರ ಸಂಘದ ಜಿಲ್ಲಾಧ್ಯಕ್ಷ ಗವಿಶಿದ್ದಪ್ಪ ಹಳ್ಳಾಕಾರ, ತಾಲೂಕು ಘಟಕದ ಅಧ್ಯಕ್ಷ ಪಿ.ಎಚ್. ಪವಾರ ಹಾಗೂ ವಿವಿಧ ಗ್ರಾಮ ಪಂಚಾಯಿತಿಗಳ ಗ್ರಂಥಾಲಯಗಳ ಮೇಲ್ವಿಚಾರಕರು ಇದ್ದರು.

### ನೌಕರರ ಸಂಘದಿಂದ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಶುಭ ಹಾರೈಕೆ

# ಆತ್ಮಸ್ಥೈರ್ಯದಿಂದ ಪರೀಕ್ಷೆ ಎದುರಿಸಿ

■ವಿಜಯಸಾಕ್ಷಿ ಸುದ್ದಿ, ಡಂಬಳ

ವಿದ್ಯಾರ್ಥಿಗಳ ಜೀವನದಲ್ಲಿ ಎಸ್‌ಎಸ್‌ಎಲ್‌ಸಿ ಮಹತ್ವದ ಹಂತವಾಗಿದೆ. ಪರೀಕ್ಷೆಯನ್ನು ಅತ್ಯಂತ ವಿಶ್ವಾಸ ಹಾಗೂ ಆತ್ಮಸ್ಥೈರ್ಯದಿಂದ ಎದುರಿಸಬೇಕು. ಯಾವುದೇ ವಿಷಯದ ಬಗ್ಗೆ ಗೊಂದಲಕ್ಕೆ ಒಳಗಾಗಬೇಡಿ, ಪರೀಕ್ಷಾ ಕೊಠಡಿಯಲ್ಲಿ ಸಮಚಿತ್ತದಿಂದ ಪ್ರಶ್ನೆ ಪತ್ರಿಕೆ ಓದಿ ಉತ್ತರಿಸಿದರೆ ಉತ್ತಮ ಅಂಕ ಗಳಿಸಬಹುದು ಎಂದು ರಾಜ್ಯ ಶಾಲಾ ಶಿಕ್ಷಣ ಇಲಾಖೆ ತಾಲೂಕಾ ನೌಕರರ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಮಡಿವಾಳರ ಹೇಳಿದರು.

ಡಂಬಳದ ಜಗದ್ಗುರು ತೋಂಟದಾರ್ಯ ಬಾಲಕ ಮತ್ತು ಬಾಲಕಿಯರ ಪ್ರೌಢಶಾಲೆಯ 2024–25ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ರಾಜ್ಯ ಶಾಲಾ ಶಿಕ್ಷಣ ಇಲಾಖೆ, ಮುಂಡರಗಿ ತಾಲೂಕಾ ನೌಕರರ ಸಂಘದ ಪದಾಧಿಕಾರಿಗಳ ಸಂಘದಿಂದ ವಿದ್ಯಾರ್ಥಿಗಳಿಗೆ ಲೇಖನಿ ಮತ್ತು ಗುಲಾಬಿ ನೀಡಿ ಶುಭ ಹಾರೈಸಿ ಮಾತನಾಡಿ, ಪ್ರಾಮಾಣಿಕವಾಗಿ, ಧೈರ್ಯದಿಂದ ಪರೀಕ್ಷೆ ಎದುರಿಸಬೇಕು. ವಿನಾಕಾರಣ ಭಯ ಬೇಡ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.



ಬಾಲಕಿಯರ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಎಸ್.ಎನ್. ಕಲ್ಲಿಗನೂರ ಮಾತನಾಡಿ, ವಾರ್ಷಿಕ ಪರೀಕ್ಷೆಯನ್ನು ಭಯಮುಕ್ತರಾಗಿ ಜಾಣ್ಮೆಯಿಂದ ಎದುರಿಸುವ ಕಲೆ ರೂಢಿಸಿಕೊಳ್ಳಬೇಕು. ಇದರಿಂದ ಶಾರೀರಿಕ ಮತ್ತು ಮಾನಸಿಕ ಚೈತನ್ಯ ವೃದ್ಧಿಸಿಕೊಳ್ಳಲು ಸಾಧ್ಯವಾಗುತ್ತದೆ. ಭವಿಷ್ಯದಲ್ಲಿ ಉತ್ತಮ ಜೀವನ ರೂಪಿಸಿಕೊಳ್ಳಲು ಈ ಪರೀಕ್ಷೆ ಪ್ರಮುಖ ಪಾತ್ರ ವಹಿಸಲಿದೆ. ವಿದ್ಯಾರ್ಥಿಗಳು ಉತ್ತಮ ಅಂಕ ಗಳಿಸುವ ಮೂಲಕ ಶಾಲೆ, ಗ್ರಾಮಕ್ಕೆ ಉತ್ತಮ ಹೆಸರು ತರಬೇಕೆಂದು ಹೇಳಿದರು.

ಸಂಘದ ಕಾರ್ಯದರ್ಶಿ ಸಂತೋಷ ನಿಂಗಾಪೂರ, ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರಾದ ದುರ್ಗಾಪ್ರಸಾದ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಬಾಲಕರ ಪ್ರೌಢಶಾಲೆಯ ಮುಖ್ಯ ಶಿಕ್ಷಕಿ ಸಂಜೋತ ಸಂಕಣ್ಣವರ, ಸಂಘದ ಜಿಲ್ಲಾ ಪರಿಷತ್ ಸದಸ್ಯ ಬಸವಣ್ಣೆಪ್ಪ ಬಿ.ಜಿ, ಖಜಾಂಚಿ ಗೀತಾ ಚನ್ನಪ್ಪಗೌಡರ, ಹಿರಿಯ ದೈಹಿಕ ಶಿಕ್ಷಕರಾದ ಉಮೇಶ ಗಡ್ಡಿ, ಸಹ ಶಿಕ್ಷಕರಾದ ಎ.ಬಿ. ಬೇವಿನಕಟ್ಟಿ, ಎಸ್.ಎಂ. ಹಂಚಿನಾಳ, ಹೇಮಂತ ಬೇವಿನಕಟ್ಟಿ, ಆನಂದ ಶಿವನಗೌಡರ, ಯರಗುಡಿ, ವಿ.ಬಿ. ವಿಭೂತಿ, ಸುನೀಲ ತಿಮ್ಮಾಪೂರ, ಎಂ.ಎಂ. ಗೌಳೇರ ಹಾಗೂ ವಿದ್ಯಾರ್ಥಿನಿಯರು ಇದ್ದರು.

# ರಾಜ್ಯ ಮಹಿಳಾ ಕಾರ್ಯದರ್ಶಿಯಾಗಿ ಲಕ್ಷ್ಮೀ ಕಾಶಿಮಠ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಶ್ರೀ ಡಾ. ಪಂ. ಪುಟ್ಟರಾಜ ರೈತ ಸಂಘ ಗದಗ ಕಾರ್ಯಾಲಯದಲ್ಲಿ ಸಂಘದ ಸಂಸ್ಥಾಪಕ ರಾಜ್ಯಾಧ್ಯಕ್ಷರಾದ ಎಮ್.ಪಿ. ಮುಳಗುಂದ ಅವರ ಆದೇಶದ ಮೇರೆಗೆ ರಾಜ್ಯ ಮಹಿಳಾ ಕಾರ್ಯದರ್ಶಿಯಾಗಿ ಲಕ್ಷ್ಮಿ ಕಾಶಿಮಠ ಅವರನ್ನು ನೇಮಕಗೊಳಿಸಲಾಯಿತು.



ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಗದಗ ಜಿಲ್ಲಾಧ್ಯಕ್ಷ ಶಂಕರಗೌಡ ಎಮ್.ಜಯನಗೌಡ್ರ, ಅಲ್ಪಸಂಖ್ಯಾತ ಘಟಕದ ರಾಜ್ಯ ಉಪಾಧ್ಯಕ್ಷ ದಾವಲಸಾಬ ನಾಗನೂರ, ರಾಜ್ಯ ಯುವ ಘಟಕಾಧ್ಯಕ್ಷ ಸಿರಾಜ ಲಕ್ಕುಂಡಿ, ಗದಗ ಜಿಲ್ಲಾ ಕಾರ್ಯದರ್ಶಿ ಬಸಯ್ಯ ಟಿ.ಮುಧೋಳಮಠ, ಪ್ರಮುಖರಾದ ಕವಿತಾ ಗುಡದೂರ, ರೇಖಾ ಅರಮನಿ, ಮನೋಹರ ಕಾರ್ಗಿ, ಗೀತಾ ಮುತ್ತಪ್ಪನವರ, ಮಂಜು, ಮೌನೇಶ ಮೈಲಾರಿ ಹಾಗೂ ಸಂಘದ ಎಲ್ಲ ಸದಸ್ಯರು ಪಾಲ್ಗೊಂಡಿದ್ದರು.

# ಮಾ.25ರಂದು ಪೂರ್ವಭಾವಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಎಪ್ರಿಲ್ 5 ರಂದು ಹಸಿರುಕ್ರಾಂತಿ ಹರಿಕಾರ ಡಾ. ಬಾಬು ಜಗಜೀವನರಾಮ್ ಅವರ 118ನೇ ಹಾಗೂ ಎಪ್ರಿಲ್ 14ರಂದು ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ 134ನೇ ಜನ್ಮ ದಿನಾಚರಣೆಯ ಹಿನ್ನೆಲೆಯಲ್ಲಿ ಮಾರ್ಚ್ 25 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ.

ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಲೂಕು ಮಟ್ಟದ ಅಧಿಕಾರಿಗಳು, ಸಾರ್ವಜನಿಕರು ಮತ್ತು ಎಲ್ಲ ಸಮುದಾಯಗಳ ಮುಖಂಡರು ಸಕಾಲಕ್ಕೆ ಸಭೆಗೆ ಆಗಮಿಸಿ ತಮ್ಮ ಸಲಹೆ ಸೂಚನೆಗಳನ್ನು ನೀಡಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೆಡ್ ಕ್ರಾಸ್ ಎಂದರೆ ಗೌರವ: ಸೋಮರಡ್ಡಿ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ರೆಡ್ ಕ್ರಾಸ್ ಸಂಸ್ಥೆಗೆ ಜಗತ್ತಿನಲ್ಲಿ ಪ್ರಾಶಸ್ತ್ಯ ಇದೆ. ಯುದ್ಧಭೂಮಿಯಲ್ಲೂ ಶಸ್ತ್ರ ತ್ಯಾಗ ಮಾಡುವಷ್ಟು ಗೌರವ ಸಂಸ್ಥೆಗಿದೆ ಎಂದು ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಕೊಪ್ಪಳ ಜಿಲ್ಲಾ ಶಾಖೆಯ ಸಭಾಪತಿ ಹಾಗೂ ಹಿರಿಯ ಪತ್ರಕರ್ತ ಸೋಮರಡ್ಡಿ ಅಳವಂಡಿ ಹೇಳಿದರು.

ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಹಾಗೂ ಯುವ ರೆಡ್ ಕ್ರಾಸ್ ಸಹಯೋಗದಲ್ಲಿ ಗುರುವಾರ ನಡೆದ ರಕ್ತದಾನ ಅರಿವು ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಜೀವನ ಅಮೂಲ್ಯ. ಜೀವನ ಸಾಗಿಸಲು ಜೀವ ಮುಖ್ಯ. ಜೀವ ಉಳಿಯಲು ರಕ್ತ ಅಗತ್ಯ. ರಕ್ತವನ್ನು ದಾನ ಮಾಡುವುದರಿಂದ ಆರೋಗ್ಯ ವೃದ್ಧಿಸುತ್ತದೆ. ಜೀವ ಮತ್ತು ಜನಜೀವನದ ನೆಮ್ಮದಿಗೆ ರೆಡ್ ಕ್ರಾಸ್ ಶ್ರಮಿಸುತ್ತಿದೆ. ವಿದ್ಯಾರ್ಥಿ ಸಮೂಹ ಈ ನಿಟ್ಟಿನಲ್ಲಿ ಜಾಗೃತಿ ಹೊಂದಬೇಕು ಎಂದು ಕರೆ ನೀಡಿದರು.




ತರೆಡ್ ಕ್ರಾಸ್ ಸಂಸ್ಥೆಯ ಜಿಲ್ಲಾ ಶಾಖೆಯ ಉಪಸಭಾಪತಿ ಡಾ.ಮಂಜುನಾಥ ಸಜ್ಜನ ಮಾತನಾಡಿ, ರಕ್ತದಾನದಿಂದ ಸಾಕಷ್ಟು ಪ್ರಯೋಜನಗಳಿವೆ. ವಿದ್ಯಾರ್ಥಿಗಳು ಇದನ್ನು ಅರಿತುಕೊಳ್ಳಬೇಕು ಎಂದು ಹೇಳಿದರು.

ರೆಡ್ ಕ್ರಾಸ್ ಸಂಸ್ಥೆಯ ಮುಖಂಡ ರಾಜೇಶ್ ಯಾವಗಲ್ ಮಾತನಾಡಿ, ಬಾಂಬೆ ಬ್ಲಡ್ ಗ್ರೂಪ್ ಕುರಿತ ಘಟನೆಯನ್ನು ವಿವರಿಸಿದರು.

ಕಾಲೇಜಿನ ಯುವ ರೆಡ್ ಕ್ರಾಸ್ ಘಟಕದ ಸಂಚಾಲಕ ಶಿವನಾಥ.ಈ.ಜಿ. ಮಾತನಾಡಿ, ರಕ್ತದಾನದಿಂದ ಹಿಮೊಗ್ಲೋಬಿನ್, ಪ್ಲಾಸ್ಮಾ, ಪ್ಲೇಟ್ ಲೆಟ್ಸ್ ಉತ್ತಮವಾಗಿರುತ್ತದೆ. ನಾವು ಬದುಕುವಷ್ಟೇ ಮುಖ್ಯವಾದದ್ದು ರಕ್ತದಾನದಿಂದ ಮತ್ತೊಬ್ಬರನ್ನು ಬದುಕಿಸುವುದು ಎಂದರು.

ಈ ಸಂದರ್ಭದಲ್ಲಿ ಬೋಧಕ ಸಿಬ್ಬಂದಿ ಅನುರಾಧಾ, ಡಾ.ಪ್ರಕಾಶ ಬಳ್ಳಾರಿ, ಡಾ.ತುಕಾರಾಮ ನಾಯ್ಕ, ಬಸವರಾಜ ಕರುಗಲ್ ಹಾಗೂ ವಿದ್ಯಾರ್ಥಿಗಳು ಇದ್ದರು.

ಕೊಪ್ಪಳ ವಿಶ್ವವಿದ್ಯಾಲಯ ಘಟಕದ ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಗಾಯತ್ರಿ ಭಾವಿಕಟ್ಟಿ ಪ್ರಾಸ್ತಾವಿಕ ಮಾತನಾಡಿದರು. ಸ್ವ ಆರ್ಥಿಕ ಘಟಕದ ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಡಾ.ಉಮೇಶ್ ಅಂಗಡಿ ಸ್ವಾಗತಿಸಿದರು. ಡಾ.ಮಹಾಂತೇಶ ನೆಲಾಗಣಿ ನಿರೂಪಿಸಿದರು. ವಿದ್ಯಾರ್ಥಿನಿ ಮಂಜುಳಾ ಪ್ರಾರ್ಥಿಸಿದರು. ಜ್ಞಾನೇಶ್ವರ ಪತ್ತಾರ ವಂದಿಸಿದರು.

# ದಿ. ಪುನೀತರಾಜ್‌ಕುಮಾರ್ ಜನ್ಮದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಮಾದಿಗ ಸಂಘರ್ಷ ಸಮಿತಿ ಗದಗ ಜಿಲ್ಲಾ ಘಟಕದ ವತಿಯಿಂದ ನಗರದ ತಳಗೇರಿ ಓಣಿಯಲ್ಲಿ ಕರ್ನಾಟಕ ರತ್ನ, ಪವರಸ್ಟಾರ್ ದಿ. ಪುನೀತರಾಜ್‌ಕುಮಾರರ 50ನೇ ಜನ್ಮದಿನಾಚರಣೆಯನ್ನು ಆಚರಿಸಿ ಅನ್ನಸಂತರ್ಪಣೆಯನ್ನು ನೆರವೇರಿಸಿದರು.

ಈ ಸಂದರ್ಭದಲ್ಲಿ ಸಮಿತಿಯ ಗದಗ ಜಿಲ್ಲಾಧ್ಯಕ್ಷ ರಾಘವೇಂದ್ರ ಪರಸಪ್ಪ ಪರಾಪೂರ ಮಾತನಾಡಿ, ಕನ್ನಡ ಚಿತ್ರರಂಗದ ಖ್ಯಾತ ನಟ ಪುನೀತರಾಜಕುಮಾರರು ಕರ್ನಾಟಕ ರಾಜ್ಯ ಮತ್ತು ಹೊರರಾಜ್ಯದಲ್ಲಿ ಅಪಾರ ಅಭಿಮಾನಿಗಳನ್ನು ಹೊಂದಿದ್ದಾರೆ. ಅವರು ಸಮಾಜಮುಖಿ ವ್ಯಕ್ತಿತ್ವವನ್ನು ಹೊಂದಿದ ಸರಳ ಜೀವಿಯಾಗಿದ್ದು ಕೊಡುಗೈ ದಾನಿಯಾಗಿದ್ದರು. ಅವರು ಮಾಡಿದ ಸಮಾಜಮುಖಿ ಕಾರ್ಯಗಳು ಇಂದಿನ ಯುವಜನತೆಗೆ ಮಾದರಿಯಾಗಿದೆ ಎಂದರು.




ಮಾದಿಗ ಸಮಾಜದ ಹಿರಿಯರಾದ ತಾರವ್ವ ದೊಡ್ಡಮನಿ, ಗುಂಡವ್ವ ಗೌಡರ, ಕೆಂಚವ್ವ ಕಟ್ಟಿಮನಿ, ಲಕ್ಷ್ಮವ್ವ ತಿಮ್ಮಾಪೂರ, ಮಾದಿಗ ಸಮಾಜದ ಯುವ ಮಹಿಳೆಯರಾದ ರೇಣುಕಾ ಪರಾಪೂರ, ಗೀತವ್ವ ಪೂಜಾರ, ಕಾವೇರಿ ಪೂಜಾರ, ಸುಮಂಗಲ ಪೂಜಾರ, ಗಣೇಶ ಯಲ್ಲಪ್ಪ ಹುಬ್ಬಳ್ಳಿ, ದೀಪಕ ಆನಂದ ಕಲ್ಮನಿ, ಪರಶುರಾಮ ಲಕ್ಷ್ಮಣ ಸಂಗಾಪೂರ, ವಿಜಯ ಫಕ್ಕೀರಪ್ಪ ಭಜಂತ್ರಿ, ಈಶ್ವರ ಶಿವಪ್ಪ ದೊಡ್ಡಮನಿ, ತುಕರಾಮ ಸುರೇಶ ಕಲ್ಮನಿ, ಜೀವನ ಮಂಜುನಾಥ ಪರಾಪೂರ, ಕೇಶವ ಯಮನಪ್ಪ ಕೋಟ್ನಿಕಲ್, ಶರಣಬಸಯ್ಯ ಹಿರೇಮಠ, ಮಲ್ಲಿಕ ಬೇಪಾರಿ ಮುಂತಾದವರು ಉಪಸ್ಥಿತರಿದ್ದರು.

# ರಸ್ತೆಯಲ್ಲಿಯೇ ಅಡ್ಡಗಟ್ಟಿ ರೌಡಿಶೀಟರ್ ಬರ್ಬರ ಕೊಲೆ!

■ವಿಜಯಸಾಕ್ಷಿ ಸುದ್ದಿ, ಚೆನ್ನೈ

ತಮಿಳುನಾಡಿನ ಈರೋಡ್‌ನಲ್ಲಿ ಆಘಾತಕಾರಿ ಘಟನೆ ಒಂದು ಜರುಗಿದೆ. ನಡು ರಸ್ತೆಯಲ್ಲಿ ರೌಡಿಯನ್ನು ಬರ್ಬರವಾಗಿ ಹತ್ಯೆ ಮಾಡಲಾಗಿದೆ.

ಕೊಲೆಯಾದ ರೌಡಿಶೀಟರ್ ನನ್ನು ಜಾನ್ ಅಲಿಯಾಸ್ ಚಾಣಕ್ಯನ್ ಎಂದು ಗುರುತಿಸಲಾಗಿದೆ. ಬುಧವಾರ ಬೆಳಗ್ಗೆ ಸೇಲಂನಿಂದ ತಿರುಪುರಕ್ಕೆ ಜಾನ್ ದಂಪತಿ ಕಾರಿನಲ್ಲಿ ತೆರಳುತ್ತಿದ್ದರು. ಮಧ್ಯಾಹ್ನ ಗೌಡಮ್ ಪಾಳ್ಯಮ್ ಬಳಿ ಹೆದ್ದಾರಿಯಲ್ಲಿ ರೌಡಿಗಳು ದಾಳಿ ನಡೆಸಿದ್ದಾರೆ. ಕಾರನ್ನು ಹಿಂಬಾಲಿಸಿಕೊಂಡು ಬಂದ ನಾಲ್ಕು ಮಂದಿ ಜಾನ್ ಕಾರನ್ನು ತಡೆದು ನಿಲ್ಲಿಸಿ ಮನಬಂದಂತೆ ಮಾರಾಕಾಸ್ತ್ರಗಳಿಂದ ಥಳಿಸಿದ್ದಾರೆ.

ಈ ವೇಳೆ ಪತಿಯನ್ನು ಉಳಿಸಿಕೊಳ್ಳಲು ಅಡ್ಡ ಬಂದ ಪತ್ನಿ ಮೇಲು ಸಹ ದಾಳಿ ಮಾಡಿದ್ದಾರೆ. ಜಾನ್ ಸ್ಥಳದಲ್ಲೇ ಸಾವನ್ನಪ್ಪಿದ್ದರೆ ಪತ್ನಿ ಗಂಭೀರ ಗಾಯಗೊಂಡಿದ್ದಾರೆ. ಪತ್ನಿಯನ್ನು ಸ್ಥಳೀಯರು ಆಸ್ಪತ್ರೆಗೆ ದಾಖಲಿಸಿದ್ದಾರೆ.

## ರಾಜೇಬಾಗಸವಾರ್ ದರ್ಗಾ ಉರುಸು ನಾಳೆ



■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಮಲ್ಲಸಮುದ್ರ ಗ್ರಾಮದಲ್ಲಿ ರಾಜೇಬಾಗಸವಾರ ಉರುಸು ನಿಮಿತ್ತ ಮಾರ್ಚ್ 22ರ ಮುಂಜಾನೆ 11.30 ಗಂಟೆಗೆ ದರ್ಗಾದ ನವೀಕೃತ ಕಟ್ಟಡದ ಉದ್ಘಾಟನಾ ಸಮಾರಂಭ ನೆರವೇರಲಿದೆ. ಕಾರ್ಯಕ್ರಮಕ್ಕೆ ಮುಖ್ಯ ಅಥಿತಿಗಳಾಗಿ ಮಾಜಿ ಶಾಸಕ ಡಿ.ಆರ್. ಪಾಟೀಲ ಆಗಮಿಸಲಿದ್ದು, ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಉದ್ಘಾಟಿಸುವರು.

ಮಾ.22ರ ರಾತ್ರಿ 8.30ಕ್ಕೆ ಗಂಧ, ಮಾ. 24ರವರೆಗೂ ಉರುಸನ್ನು ಆಚರಿಸಲಾಗುತ್ತದೆ. ಜಿಲ್ಲೆಯ ಮತ್ತು ಮಲ್ಲಸಮುದ್ರ ಗ್ರಾಮದ ಸುತ್ತುಮುತ್ತಲಿನ ಗ್ರಾಮದ ಸಕಲ ಸದ್ಭಕ್ತರು ಆಗಮಿಸಿ, ರಾಜೇಬಾಗೆಸವಾರ ಇವರ ಪ್ರಸಾದ ಮತ್ತು ಆಶೀರ್ವಾದ ಪಡೆದುಕೊಂಡು ಕೃತಾರ್ಥರಾಗಬೇಕೆಂದು ಸಮಾಜ ಸೇವಕರು ಹಾಗೂ ಕಾಂಗ್ರೆಸ್ ಮುಖಂಡರಾದ ಜನಾಬ್ ಅಬ್ದುಲ್ ಮುನಾಫ್ ಮುಲ್ಲಾ ಪ್ರಕಟಣೆಯಲ್ಲಿ ಕೋರಿದ್ದಾರೆ.

## ಅಡವಿಸೋಮಾಪುರದಲ್ಲಿ ಆರೋಗ್ಯ ತಪಾಸಣಾ ಶಿಬಿರ




■ ವಿಜಯಸಾಕ್ಷಿ ಸುದ್ದಿ, ಗದಗ

ಸಾರ್ವಜನಿಕ ಆರೋಗ್ಯದ ಹಿತದೃಷ್ಟಿಯಿಂದ ಗದಗ ಜಿಮ್ಸ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ವೈದ್ಯರ ತಂಡದಿಂದ ಅಡವಿಸೋಮಪುರ ಗ್ರಾಮದಲ್ಲಿ ಮನೆ ಸರ್ವೆ ಮಾಡಿ ಗದಗ ಜಿಮ್ಸ್ ವೈದ್ಯರ ತಂಡ, ಅಡವಿಸೋಮಾಪುರ ಗ್ರಾಮ ಪಂಚಾಯಿತಿ, ಆಯುಷ್ಮಾನ್ ಆರೋಗ್ಯ ಮಂದಿರದಿಂದ ಆರೋಗ್ಯ ತಪಾಸಣಾ ಶಿಬಿರವನ್ನು ಏರ್ಪಡಿಸಲಾಗಿತ್ತು. ಶಿಬಿರದಲ್ಲಿ ಮಧುಮೇಹ, ಅಧಿಕ ರಕ್ತದೊತ್ತಡ ಮುಂತಾದ ಹಲವಾರರು ರೋಗಗ ಬಗ್ಗೆ ಜಿಮ್ಸ್ ಸಮುದಾಯ ಆರೋಗ್ಯ ವಿಭಾಗದ ಡಾ. ಅರವಿಂದ್, ಡಾ. ಜನ್ನತ, ಡಾ. ಗುರಪ್ಪ, ಡಾ. ಕಿರಣ್, ಡಾ. ಜಿನೋನಾಥ, ಮಕ್ಕಳ ತಜ್ಞರಾದ ಡಾ. ಜಿತೇಂದ್ರ, ಜೀವರಸಾಯನಶಾಸ್ತ್ರ ವಿಭಾಗದ ಡಾ. ಶಶಿಕುಮಾರ ಆರೋಗ್ಯ ತಪಾಸಣೆ ಮಾಡಿದರು. ಶಿಬಿರಕ್ಕೆ ಗ್ರಾ.ಪಂ ಉಪಾಧ್ಯಕ್ಷ ಶಾಮಸುಂದರ ಎಂ.ಡಂಬಳ ಹಾಗೂ ಗ್ರಾ.ಪಂ ಅಭಿವೃದ್ಧಿ ಅಧಿಕಾರಿಗಳಾದ ಪ್ರೇಮಾ ಹಟ್ಟಿಯವರು ಭೇಟಿ ನೀಡಿದರು. ಆರೋಗ್ಯ ನಿರೀಕ್ಷಣಾಧಿಕಾರಿ ಶಿದ್ದಪ್ಪ ಎನ್.ಲಿಂಗದಾಳ ಶಾಲಾ ಆವರಣದಲ್ಲಿ ಸಸಿ ನೆಟ್ಟರು. ಶಿಕ್ಷಕರಾದ ಮಂಜುನಾಥ ದೊಡ್ಡಮನಿ, ಎಸ್.ಬಿ. ಗಡಾದ, ಸಮೀಕ್ಷಾ ತಂಡದ ಕಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಮಲ್ಲಯ್ಯ ಕಲ್ಮಠ, ಬಸವರಾಜ್ ಬಡಿಗೇರ, ಆರ್.ಜಿ. ಸುರೇಶ ಕುಲಕರ್ಣಿ, ಹನುಮಂತ ಬಳಗಾನೂರ ವೈದ್ಯಕೀಯ ಸೇವೆಯನ್ನು ನೀಡಿದರು. ದೈಹಿಕ ಶಿಕ್ಷಣಾಧಿಕಾರಿಗಳಾದ ಶ್ರೀಮತಿ ದೊಡ್ಡಮನಿ, ಪರಶುರಾಮ್ ಹೊಂಬಳ, ಆಶಾ ಕಾರ್ಯಕರ್ತೆ ಮಾಲಾ ಮೇವುಂಡಿ, ಉಮಾ ಖಾನಾಪೂರ, ರೇಣುಕಾ ಪುರದ ಉಪಸ್ಥಿತರಿದ್ದರು ಎಂದು ಮಲ್ಲಯ್ಯ ಕಲ್ಲಮಠ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕಾಯಕಬಂಧುಗಳ ತರಬೇತಿ ಕಾರ್ಯಾಗಾರದಲ್ಲಿ ಎಸ್.ಕೆ. ಇನಾಮದಾರ ಹೇಳಿಕೆ

# ಏಪ್ರಿಲ್ 1ರಿಂದ ಉದ್ಯೋಗ ಖಾತ್ರಿ ಕೆಲಸ ಆರಂಭ

■ ವಿಜಯಸಾಕ್ಷಿ ಸುದ್ದಿ, ನರಗುಂದ

ಬರಗಾಲವಿದೆಯೆಂದು ಗ್ರಾಮೀಣ ಪ್ರದೇಶದ ಕೂಲಿಕಾರರಿಗೆ ಕೆಲಸ ಸಿಗದು ಎಂಬ ಭಯಬೇಡ. ಏಪ್ರಿಲ್ 1ರಿಂದ ಉದ್ಯೋಗ ಖಾತ್ರಿ ಕೆಲಸ ಆರಂಭವಾಗುತ್ತಿದ್ದು, ಯೋಜನೆಯಡಿ ಅನೇಕ ಅಭಿವೃದ್ಧಿ ಕಾಮಗಾರಿ ಕೈಗೊಳ್ಳುವ ಅವಕಾಶವಿದೆ. ಗ್ರಾಮೀಣ ಪ್ರದೇಶಗಳ ಕಡುಬಡವರಿಗೂ ಯೋಜನೆಯ ಸದುಪಯೋಗ ದೊರಕುವಂತಾಗಬೇಕು ಎಂದು ನರಗುಂದ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಕೆ. ಇನಾಮದಾರ ಅಭಿಪ್ರಾಯಪಟ್ಟರು.

ನಗರದ ತಾ.ಪಂ ಸಭಾಭವನದಲ್ಲಿ ಗುರುವಾರ ನಡೆದ ಪಿಡಿಓ, ಕಾಯಕಬಂಧು ಹಾಗೂ ನರೇಗಾ ಸಿಬ್ಬಂದಿಗಳ ಒಂದು ದಿನದ ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಇದ್ದೂರಲ್ಲೇ ನರೇಗಾ ಕೆಲಸ ಕೊಡುತ್ತಿರುವುದು ಗ್ರಾಮೀಣ ಪ್ರದೇಶದ ಜನರ ಗುಳೇ ತಪ್ಪಿಸುವ ಕೆಲಸವಾಗಿದೆ. ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಗೆ ನರೇಗಾ ಯೋಜನೆ ಮಹತ್ವದ ಪಾತ್ರ ವಹಿಸಿದೆ. ಯೋಜನೆಯಡಿ ವಾರ್ಷಿಕವಾಗಿ 100 ದಿನಗಳವರೆಗೆ ಗ್ರಾಮೀಣ ಪ್ರದೇಶದ ಕೂಲಿಕಾರರಿಗೆ ಕೆಲಸ ಸಿಗುವಂತಾಗಬೇಕು. ಆ ಮೂಲಕ ಗ್ರಾಮೀಣ ಪ್ರದೇಶದ ಮೂಲಭೂತ ಸಮಸ್ಯೆಗಳನ್ನು ನಿವಾರಿಸಲು ನರೇಗಾ ವರದಾನವಾಗಲಿದೆ. ತಾಲೂಕಿನ ಎಲ್ಲ ಗ್ರಾ.ಪಂಗಳ ಕಾಯಕ ಬಂಧುಗಳು ನರೇಗಾ ಕೆಲಸಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಕೂಲಿಕಾರರನ್ನು ಸೇರಿಸುವ ಕೆಲಸ ಮಾಡಬೇಕು ಎಂದರು.



ಅಕ್ಷರ ದಾಸೋಹದ ಸಹಾಯಕ ನಿರ್ದೇಶಕರಾದ ಮಾರುತಿ ಅಸುಂಡಿ ಮಾತನಾಡಿ, ನರೇಗಾ ಯೋಜನೆಯ ಕಾಮಗಾರಿಗಳಿಂದ ಶಾಲೆಯ ಮೂಲಸೌಕರ್ಯಗಳ ನಿರ್ಮಾಣಕ್ಕೆ ನೆರವಾಗಿದೆ ಎಂದು ಯೋಜನೆಯ ಕಾಮಗಾರಿಗಳ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿದರು.

ಅತಿಥಿಯಾಗಿ ಭಾಗವಹಿಸಿದ್ದ ನರೇಗಾ ಯೋಜನೆಯ ಸಹಾಯಕ ನಿರ್ದೇಶಕ ಸಂತೋಷಕುಮಾರ್ ಪಾಟೀಲ್ ಮಾತನಾಡಿ, ಪ್ರತಿವರ್ಷ ಬದಲಾವಣೆಯಾಗುವ ನಿಯಮಾವಳಿಗೆ ಅನುಗುಣವಾಗಿ ನರೇಗಾ ಕೆಲಸ ನಿರ್ವಹಿಸಲು ಕಾಯಕಬಂಧುಗಳಿಗೆ ತರಬೇತಿ ಅತ್ಯವಶ್ಯಕವಾಗಿದೆ. ನರೇಗಾ ಕೆಲಸದಲ್ಲಿ ಮಹಿಳೆಯರು ಸ್ವಯಂ ಪ್ರೇರಣೆಯಿಂದ ಭಾಗವಹಿಸುವಂತಾಗಬೇಕು. ಕಾಯಕಬಂಧುಗಳು ಮಹಿಳಾ ಸ್ವ-ಸಹಾಯ ಸಂಘದ ಸದಸ್ಯರನ್ನು ಸಂಪರ್ಕಿಸಿ ನರೇಗಾ ಯೋಜನೆಯಲ್ಲಿ ಮಹಿಳಾ ಭಾಗವಹಿಸುವಿಕೆ ಪ್ರಮಾಣ ಹೆಚ್ಚಿಸಲು ಶ್ರಮವಹಿಸಬೇಕೆಂದು ತಿಳಿಸಿದರು.

ಕಾರ್ಯಾಗಾರದಲ್ಲಿ ಮಾಹಿತಿ ಮತ್ತು ಶಿಕ್ಷಣ ಸಂಯೋಜಕ ಸುರೇಶ ಬಾಳಿಕಾಯಿ ಕಾಯಕಬಂಧುಗಳ ಪಾತ್ರ ಮತ್ತು ಜವಾಬ್ದಾರಿ ಕುರಿತು ತರಬೇತಿ ನೀಡಿದರು. ಬೇಸಿಗೆ ಅವಧಿಯಲ್ಲಿ ನರಗುಂದ ಆರೋಗ್ಯ ಇಲಾಖೆಯ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಜಿ.ವ್ಹಿ. ಕೊಣ್ಣೂರು, ಕಾಯಕಬಂಧುಗಳಿಗೆ ಬೇಸಿಗೆಯ ಬಿಸಿಲಿನ ತಾಪವನ್ನು ಎದುರಿಸಿ ಕೆಲಸ ನಿರ್ವಹಿಸುವುದು ಹೇಗೆ ಎಂಬುದರ ಬಗ್ಗೆ ಮಾಹಿತಿ ಒದಗಿಸಿದರು. ನರೇಗಾ ಕೂಲಿಕಾರರು ತೆಳುವಾದ ಬಿಳಿಬಣ್ಣದ ನೂಲಿನ ಬಟ್ಟೆಯನ್ನು ತೊಟ್ಟು ಕೆಲಸ ಮಾಡುವಂತೆ ತಿಳಿಸಿದರು. ಅಲ್ಲದೆ ಮಾರುಕಟ್ಟೆಯಲ್ಲಿ ಸಿಗುವ ತಂಪು ಪಾನೀಯಗಳನ್ನು ಕುಡಿಯದೇ ಮನೆಯಲ್ಲಿ ಸಿದ್ಧಪಡಿಸಿದ ಮಜ್ಜಿಗೆ, ಪಾನಕದಂತಹ ಪಾನೀಯಗಳನ್ನು ಹೆಚ್ಚಾಗಿ ಸೇವಿಸಬೇಕೆಂದು ತಿಳಿಸಿದರು.

ರೈತರ ಹೊಲದಲ್ಲಿ ಯೋಜನೆಯಡಿ ನಿರ್ಮಿಸುವ ಕಂದಕಬದುಗಳ ನಿರ್ಮಾಣ ಮತ್ತು ಅನುಷ್ಠಾನ ಕುರಿತು ತಾಂತ್ರಿಕ ಸಂಯೋಜಕ ಹನಮಂತ ಡಂಬಳ ವಿಷಯ ಮಂಡಿಸಿದರು. ಕೂಲಿಕಾರರ ಹಾಜರಾತಿ ನಿರ್ವಹಣೆ ಕುರಿತು ಎಂಐಎಸ್ ಸಂಯೋಜಕ ಮಹೇಶ ಚಿತ್ತವಾಡಗಿ ವಿಷಯ ಮಂಡಿಸಿದರು.

ತರಬೇತಿಯಲ್ಲಿ ನರಗುಂದ ತಾಲೂಕಿನ 13 ಗ್ರಾ.ಪಂಗಳ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ನರೇಗಾ ಸಿಬ್ಬಂದಿ ವರ್ಗದವರು ಹಾಜರಿದ್ದರು.

### ಸ್ವಾತಿ ರಮೇಶ ಬ್ಯಾಡಗಿ ಹತ್ಯೆ ಖಂಡಿಸಿ ಎಬಿವಿಪಿಯಿಂದ ಪ್ರತಿಭಟನೆ, ಮನವಿ ಸಲ್ಲಿಕೆ

# ಸ್ವಾತಿ ಹತ್ಯೆಗೆ ನ್ಯಾಯ ಒದಗಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಾವೇರಿ ಜಿಲ್ಲಾ ರಟ್ಟಿಹಳ್ಳಿ ತಾಲೂಕಿನ ಮಾಸೂರ ಗ್ರಾಮದ ಸ್ವಾತಿ ರಮೇಶ ಬ್ಯಾಡಗಿ ಎಂಬ ಯುವತಿಯ ಹತ್ಯೆಯನ್ನು ಖಂಡಿಸಿ, ಪಟ್ಟಣದಲ್ಲಿ ಗುರುವಾರ ಎಬಿವಿಪಿ ನೇತೃತ್ವದಲ್ಲಿ ಶಾಲಾ-ಕಾಲೇಜು ವಿದ್ಯಾರ್ಥಿಗಳು, ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿ ತಹಸೀಲ್ದಾರರಿಗೆ ಮನವಿ ಅರ್ಪಿಸಿದರು. ಈ ಸಂದರ್ಭದಲ್ಲಿ ಎಬಿವಿಪಿ ರಾಜ್ಯ ಕಾರ್ಯಕಾರಿಣಿ ಸದಸ್ಯ ಹಾಗೂ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಅರುಣ ಬಾರಕಿ ಮತ್ತು ನಗರ ಕಾರ್ಯದರ್ಶಿ ಅಭಿಷೇಕ ಉಮಚಗಿ ಮಾತನಾಡಿ, ಸ್ವಾತಿಯನ್ನು ಮಾಸೂರಿನ ಮುಸ್ಲಿಂ ಯುವಕ ಪ್ರೀತಿಸಿ ಮದುವೆಯಾಗುವುದಾಗಿ ನಂಬಿಸಿ, ನಂತರ ಬೇರೊಂದು ಹುಡುಗಿಯೊಂದಿಗೆ ಮದುವೆ ನಿಶ್ಚಯವನ್ನು ಮಾಡಿಕೊಂಡಿದ್ದ. ಇದರ ನಡುವೆ ಯುವತಿಯ ಶವ ಸಿಕ್ಕಿದ್ದು, ಈ ಕೊಲೆಯ ಸುತ್ತ ಲವ್ ಜಿಹಾದ್‌ನ ಪ್ರಯತ್ನ ಎದ್ದು ತೋರುತ್ತಿದೆ. ಈ ಪ್ರಕರಣದ ಕುರಿತು ಪೊಲೀಸ್ ಇಲಾಖೆ ಸೂಕ್ತ ತನಿಖೆ ನಡೆಸಬೇಕು, ಇದರಲ್ಲಿ ಸರಕಾರ ರಾಜಕೀಯ ಹಸ್ತಕ್ಷೇಪ ಮಾಡಬಾರದು. ಸ್ವಾತಿ ಬ್ಯಾಡಗಿ ಹತ್ಯೆಗೆ ನ್ಯಾಯವನ್ನು ಒದಗಿಸಿ ಆರೋಪಿಗಳಿಗೆ ಕಠಿಣ ಶಿಕ್ಷೆ ವಿಧಿಸಬೇಕೆಂದು ಅಗ್ರಹಿಸಿದರು. ತನಿಖೆಯಲ್ಲಿ ಪೊಲೀಸರು ಹಲವಾರು ರೀತಿಯ ಲೋಪವನ್ನು ಎಸಗುತ್ತಿದ್ದು, ತರಾತುರಿಯಲ್ಲಿ ಶವ ಯಾರದ್ದೆಂದು ಸರಿಯಾಗಿ ಗುರುತಿಸುವ ಮುನ್ನವೇ ಅಂತ್ಯಕ್ರಿಯೆ ನಡೆದಿರುವುದು ಬಹಳಷ್ಟು ಅನುಮಾನಕ್ಕೆ ಕಾರಣವಾಗಿದೆ ಎಂದು ಆರೋಪಿಸಿದರು. ತಹಸೀಲ್ದಾರ ವಾಸುದೇವ ವಿ.ಸ್ವಾಮಿ ಮನವಿ ಸ್ವೀಕರಿಸಿ ಸೂಕ್ತ ಕ್ರಮಕ್ಕೆ ಮೇಲಾಧಿಕಾರಿಗಳಿಗೆ ಸಲ್ಲಿಸಲಾಗುವದು ಎಂದು ಹೇಳಿದರು. ತಾಲೂಕಾ ಸಂಚಾಲಕ ಪ್ರಕಾಶ ಕುಂಬಾರ, ಸಂಜನಾ ಪಾಟೀಲ್, ತೇಜಸ್ವಿನಿ ಕ್ಷತ್ರಿ, ಅಭಿಷೇಕ ಇಷನಗೌಡ್ರು, ಪೂರ್ಣಿಮಾ ಕ್ಷತ್ರಿ, ಅರವಿಂದ ಇಚ್ಚಂಗಿ, ವಿರೇಶ ಕುಂಬಾರ, ವಿನಾಯಕ ಹುಂಬಿ, ವಿನಾಯಕ ಕುಂಬಾರ, ಕಾರ್ತಿಕ ಹುನಗುಂದ, ವಿನಾಯಕ ಉಮಚಗಿ ಮತ್ತು ತಾಲೂಕಿನ ವಿವಿಧ ಕಾಲೇಜು ವಿದ್ಯಾರ್ಥಿಗಳು ಪ್ರತಿಭಟನೆಯಲ್ಲಿ ಭಾಗಿಯಾಗಿದ್ದರು.



ಪಟ್ಟಣದ ವಿವಿಧ ಕಾಲೇಜಿನ ನೂರಾರು ವಿದ್ಯಾರ್ಥಿಗಳು ಪ್ರಮುಖ ಬೀದಿಯಲ್ಲಿ ಮೆರವಣಿಗೆ ನಡೆಸಿ, ಘೋಷಣೆ ಕೂಗುತ್ತ ತಹಸೀಲ್ದಾರ ಕಚೇರಿ ತಲುಪಿದರು. ತಹಸೀಲ್ದಾರರು ಕಚೇರಿಗೆ ಬರುವದು ವಿಳಂಬವಾಗಿದ್ದರಿಂದ ಕಾರ್ಯಕರ್ತರು ಕಚೇರಿಗೆ ನುಗ್ಗಲು ಯತ್ನಿಸಿದಾಗ ಕಾರ್ಯಕರ್ತರನ್ನು ಸಿಪಿಐ ನಾಗರಾಜ ಮಾಡಳ್ಳಿ, ಅಪರಾದ ವಿಭಾಗದ ಪಿಎಸ್ಐ, ಟಿ.ಕೆ. ರಾಠೋಡ ಸೇರಿದಂತೆ ಪೊಲೀಸ್ ಸಿಬ್ಬಂದಿಗಳು ತಡೆದು ಸಮಾಧಾನಪಡಿಸಿದರು.

# ದಾಖಲೆಯ ಬೆಲೆಗೆ ವಾಣಿಜ್ಯ ಮಳಿಗೆ ಹರಾಜು

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಗ್ರಾಮ ಸಭೆಯಲ್ಲಿ ಗ್ರಾಮ ಪಂಚಾಯಿತಿಯ ವಾಣಿಜ್ಯ ಮಳಿಗೆಯ ಟೆಂಡರ್ ಪ್ರಕ್ರಿಯೆ ನಡೆದು, ಒಂದು ಮಾರಾಟ ಮಳಿಗೆಯು ದಾಖಲೆಯ 31100 ರೂ ಹರಾಜು ಪಡೆದುಕೊಂಡಿದ್ದು, ಇಂತಹ ಅತ್ಯಧಿಕ ಏರಿಕೆಯ ಹರಾಜು ಗದಗ, ಹುಬ್ಬಳ್ಳಿಯಂತಹ ನಗರಗಳಲ್ಲಿಯೂ ಸಹ ಆಗಿಲ್ಲವೆಂಬ ಮಾತು ಸಾರ್ವಜನಿಕ ವಲಯದಲ್ಲಿ ಕೇಳಿಬಂದಿತು.




ಒಟ್ಟು 22 ವಾಣಿಜ್ಯ ಮಳಿಗೆಗಳಲ್ಲಿ 2 ಮಳಿಗೆ ಸ್ತ್ರೀ ಶಕ್ತಿ ಸಂಘಗಳಿಗೆ, 3 ಎಸ್.ಸಿ. ವರ್ಗಕ್ಕೆ, 1 ಎಸ್.ಟಿ, 1 ವಿಕಲಚೇತನರು, 1 ಮಾಜಿ ಸೈನಿಕರಿಗೆ ಮೀಸಲಾತಿ ಸೇರಿದಂತೆ 14 ಮಳಿಗೆಗಳು ಸಾಮಾನ್ಯ ವರ್ಗದ ಜನರಿಗೆ ಟೆಂಡರ್ ನಡೆಯಿತು. ಸ್ತ್ರೀ ಶಕ್ತಿ ಸಂಘಕ್ಕೆ 2600 ರೂ.ಗಳಿಗೆ ಹರಾಜು ಆಗಿ ಉಳಿದಂತೆ ತಿಂಗಳಿಗೆ 3500 ರೂ.ನಿಂದ ಆರಂಭವಾಗಿ 31100 ರೂವರೆಗೂ ಹರಾಜು ನಡೆಯಿತು.

ಗ್ರಾಮದಲ್ಲಿ ನಡೆಯುವ ವಾರದ 2 ಸಂತೆಗಳ ಕರ ವಸೂಲಿ ಹರಾಜು 52500 ರೂ.ಗೆ ಆಯಿತು. ಗ್ರಾ.ಪಂ ಒಂದು ಮಳಿಗೆಗೆ ತಿಂಗಳಿಗೆ 2500 ರೂ ಬಾಡಿಗೆ ನಿಗದಿಪಡಿಸಲಾಗಿತ್ತು. 90 ಜನರು ಟೆಂಡರ್ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದರು. ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಗ್ರಾ.ಪಂ ಸದಸ್ಯರು ಹಾಜರಿದ್ದರು. ಪಿ.ಡಿ.ಓ ಅಮೀರನಾಯಕ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯದರ್ಶಿ ಪ್ರದೀಪ ಆಲೂರ ಟೆಂಡರ್ ನಿಯಮಾವಳಿಗಳ ಬಗ್ಗೆ ಸಭೆಗೆ ವಿವರಿಸಿದರು.

### ಆದರ್ಶ ವಿದ್ಯಾಲಯಗಳಿಗೆ 6ನೇ ತರಗತಿ ಪ್ರವೇಶ ಪರೀಕ್ಷೆ

# ಪರೀಕ್ಷಾ ಕೇಂದ್ರಗಳ ಸುತ್ತ ಪ್ರತಿಬಂಧಕಾಜ್ಞೆ

■ ವಿಜಯಸಾಕ್ಷಿ ಸುದ್ದಿ, ಗದಗ

ಆದರ್ಶ ವಿದ್ಯಾಲಯಗಳಿಗೆ 6ನೇ ತರಗತಿ ದಾಖಲಾತಿಗೆ ನಡೆಯುವ ಪ್ರವೇಶ ಪರೀಕ್ಷೆಗಳು ರೋಣ ಮತ್ತು ಮುಂಡರಗಿ ತಾಲೂಕಿನಲ್ಲಿ ಮಾರ್ಚ್ 23ರಂದು ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಜಿಲ್ಲೆಯ 8 ಪರೀಕ್ಷಾ ಕೇಂದ್ರಗಳಲ್ಲಿ ಜರುಗಲಿವೆ. ಸದರಿ ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು, ಶಾಂತಿ-ಸುವ್ಯವಸ್ಥೆ ಕಾಪಾಡುವ ಸಲುವಾಗಿ ಪರೀಕ್ಷಾ ಕೇಂದ್ರದಿಂದ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವನ್ನಾಗಿ ಘೋಷಿಸಿದೆ.

ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಪರಿಮಿತಿಯೊಳಗೆ ಮಾರ್ಚ್ 23ರಂದು ಬೆಳಿಗ್ಗೆ 9 ಗಂಟೆಯಿಂದ ಮಧ್ಯಾಹ್ನ 3 ಗಂಟೆಯವರೆಗೆ ಈ ಕೆಳಗಿನಂತೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.

ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು, ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ಹಾಗೂ ಅನಧಿಕೃತ ವ್ಯಕ್ತಿಗಳಿಗೆ ಪರೀಕ್ಷಾ ಕೇಂದ್ರಗಳ ಪ್ರವೇಶವನ್ನು ನಿರ್ಬಂಧಿಸಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝರಾಕ್ಸ್ ಅಂಗಡಿ, ಸೈಬರ್ ಸೆಂಟರ್, ಬುಕ್‌ಸ್ಟಾಲ್, ಫೋಟೋ ಕಾಪಿಯರ್‌ಗಳನ್ನು ಬಂದ್ ಮಾಡಲು ಆದೇಶಿಸಿದೆ. ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಫೋನ್ ಮತ್ತು ಇತರೇ ಸಂಪರ್ಕ ಸಲಕರಣೆಗಳನ್ನು ತರುವುದನ್ನು ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಧಾರ್‌ನೊಂದಿಗೆ ಎಪಿಕ್ ಜೋಡಣೆಗೆ ಶೀಘ್ರ ಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ಆಧಾರ್ ಕಾರ್ಡ್‌ನೊಂದಿಗೆ ಎಪಿಕ್ ಸಂಖ್ಯೆಯನ್ನು ಕೂಡಲೇ ಜೋಡಣೆ ಮಾಡಲು ಕ್ರಮ ವಹಿಸಲಾಗುವುದು ಎಂದು ಭಾರತ ಚುನಾವಣಾ ಆಯೋಗದ ಮುಖ್ಯ ಚುನಾವಣಾ ಆಯುಕ್ತರಾದ ಜ್ಞಾನೇಶ್ ಕುಮಾರ್ ತಿಳಿಸಿದ್ದಾರೆ.

ಈ ಸಂಬಂಧ ನವದೆಹಲಿಯ ನಿರ್ವಚನ ಸದನದಲ್ಲಿ ಚುನಾವಣಾ ಭಾರತೀಯ ಚುನಾವಣಾ ಆಯೋಗದ ಮುಖ್ಯ ಚುನಾವಣಾ ಆಯುಕ್ತರಾದ ಜ್ಞಾನೇಶ್ ಕುಮಾರ್ ಅವರ ನೇತೃತ್ವದಲ್ಲಿ ಚುನಾವಣಾ ಆಯುಕ್ತರಾದ ಡಾ. ಸುಖಬೀರ್ ಸಿಂಗ್ ಸಂಧು ಮತ್ತು ಡಾ. ವಿವೇಕ್ ಜೋಶಿ ಅವರು ಕೇಂದ್ರ ಗೃಹ ಕಾರ್ಯದರ್ಶಿ, ಶಾಸಕಾಂಗ ಇಲಾಖೆ, ಕಾರ್ಯದರ್ಶಿ ಮೇಟಿ ಮತ್ತು ಯುಐಡಿಎಐ ಮುಖ್ಯ ಕಾರ್ಯ ನಿರ್ವಣಾಧಿಕಾರಿ ಮತ್ತು ಇಸಿಐನ ತಾಂತ್ರಿಕ ತಜ್ಞರೊಂದಿಗೆ ಸಭೆ ನಡೆಸಿ ಚರ್ಚಿಸಿದರು.

ಚುನಾವಣಾ ಆಯೋಗವು ಆರ್ಟಿಕಲ್ 326, ಆರ್‌ಪಿ ಆ್ಯಕ್ಟ್, 1950 ಮತ್ತು ಸುಪ್ರೀಂ ಕೋರ್ಟ್ ತೀರ್ಪುಗಳ ಪ್ರಕಾರ ಕ್ರಮ ಕೈಗೊಳ್ಳುತ್ತದೆ. UIDAI ಮತ್ತು ECI ಯ ತಜ್ಞರ ನಡುವಿನ ತಾಂತ್ರಿಕ ಸಮಾಲೋಚನೆಗಳು ಶೀಘ್ರದಲ್ಲೇ ಪ್ರಾರಂಭವಾಗಲಿವೆ.

ಭಾರತದ ಸಂವಿಧಾನದ 326ನೇ ವಿಧಿಯ ಪ್ರಕಾರ, ಮತದಾನದ ಹಕ್ಕನ್ನು ಭಾರತದ ನಾಗರಿಕರಿಗೆ ಮಾತ್ರ ನೀಡುವುದು, ಆಧಾರ್ ಕಾರ್ಡ್ ವ್ಯಕ್ತಿಯ ಗುರುತನ್ನು ಮಾತ್ರ ಸ್ಥಾಪಿಸುತ್ತದೆ. ಎಪಿಕ್ ಅನ್ನು ಆಧಾರ್‌ನೊಂದಿಗೆ ಲಿಂಕ್ ಮಾಡುವುದನ್ನು ಸಂವಿಧಾನದ 326ನೇ ವಿಧಿ, 1950ರ ಜನತಾ ಪ್ರಾತಿನಿಧ್ಯ ಕಾಯ್ದೆಯ ಸೆಕ್ಷನ್ 23(4), 23(5) ಮತ್ತು 23(6)ರ ನಿಬಂಧನೆಗಳ ಪ್ರಕಾರ ಕ್ರಮವಹಿಸಲಾಗುವುದು.

ಯುಐಡಿಎಐ ಮತ್ತು ಇಸಿಐನ ತಾಂತ್ರಿಕ ತಜ್ಞರ ನಡುವಿನ ತಾಂತ್ರಿಕ ಸಮಾಲೋಚನೆಗಳು ಶೀಘ್ರದಲ್ಲೇ ಪ್ರಾರಂಭವಾಗಲಿವೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

## ಚಾಲಕನ ನಿಯಂತ್ರಣ ತಪ್ಪಿ ಹೊಲಕ್ಕೆ ನುಗ್ಗಿದ ಸರ್ಕಾರಿ ಬಸ್ !

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ತಾಲೂಕಿನ ಮರೇವಾಡ ಗ್ರಾಮದ ಬಳಿ ಚಾಲಕನ ನಿಯಂತ್ರಣ ತಪ್ಪಿ ಸರ್ಕಾರಿ ಬಸ್ಸೊಂದು ಹೊಲಕ್ಕೆ ನುಗ್ಗಿದ ಘಟನೆ ಜರುಗಿದೆ. ಅದೃಷ್ಟವಶಾತ್ ಘಟನೆಯಿಂದ ಭಾರೀ ಅನಾಹುತ ತಪ್ಪಿದ್ದು, ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ.

ಚಾಲಕನ ನಿಯಂತ್ರಣ ತಪ್ಪಿ ಈ ಅವಘಡ ಸಂಭವಿಸಿದೆ. ಧಾರವಾಡದಿಂದ ಸವದತ್ತಿಗೆ ಈ ಬಸ್ ತೆರಳುತ್ತಿತ್ತು ಎನ್ನಲಾಗಿದೆ. ಘಟನೆಯಿಂದ ಬಸ್‌ನಲ್ಲಿದ್ದ 40 ಜನರು ಅದೃಷ್ಟವಶಾತ್ ಪಾರಾಗಿದ್ದು, ಕೆಲವರಿಗೆ ಸಣ್ಣ ಪುಟ್ಟ ಗಾಯಗಳಾಗಿದೆ.

ಧಾರವಾಡ ಗ್ರಾಮೀಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ಜರುಗಿದೆ.

### ಶ್ರೀ ರೇವಣಸಿದ್ದಯ್ಯ ಸ್ವಾಮಿಗಳ 39ನೇ ವರ್ಷದ ಪುಣ್ಯ ಸ್ಮರಣೋತ್ಸವದಲ್ಲಿ ರಂಭಾಪುರಿ ಶ್ರೀಗಳು

# ಹುಟ್ಟು ಸಹಜ, ಸಾವು ನಿಶ್ಚಿತ

■ ವಿಜಯಸಾಕ್ಷಿ ಸುದ್ದಿ, ಇಂಡಿ

ಮಾನವ ಜೀವನ ಅಮೂಲ್ಯವಾದದ್ದು. ಧರ್ಮದ ಆದರ್ಶ ಮೌಲ್ಯಗಳನ್ನು ಜೀವನದ ಪರಿಪಾಲನೆಯಲ್ಲಿ ಅಳವಡಿಸಿಕೊಂಡಾಗ ಬದುಕು ಸಾರ್ಥಕ. ಹುಟ್ಟು ಎಷ್ಟು ಸಹಜವೋ ಸಾವು ಕೂಡ ನಿಶ್ಚಿತವಾದುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ತಾಲೂಕಿನ ಜೇವೂರು ಗ್ರಾಮದ ಶ್ರೀ ರೇವಣಸಿದ್ದಯ್ಯ ಸ್ವಾಮಿಗಳ 39ನೇ ವರ್ಷದ ಪುಣ್ಯ ಸ್ಮರಣೋತ್ಸವ ಹಾಗೂ ಸಾಮೂಹಿಕ ವಿವಾಹ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.




ಆಧುನಿಕ ಯುಗದಲ್ಲಿ ಧರ್ಮ ಸಂಸ್ಕೃತಿಗಳ ಬಗ್ಗೆ ನಿರ್ಲಕ್ಷ ಮನೋಭಾವ ಉಂಟಾಗುತ್ತಿದ್ದು, ಎಲ್ಲೆಡೆ ಅಶಾಂತಿ-ಅತೃಪ್ತಿ ಹೆಚ್ಚುತ್ತಿದೆ. ಇಂಥ ಸಂದರ್ಭದಲ್ಲಿ ಧರ್ಮವನ್ನು ಪರಿಪಾಲಿಸಿಕೊಂಡು ಬರುವ ಅಗತ್ಯವಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಧಾರ್ಮಿಕ ಮತ್ತು ಸಾಮಾಜಿಕ ವಿಚಾರ ಧಾರೆಗಳು ಬದುಕಿ ಬಾಳುವ ಜನಾಂಗಕ್ಕೆ ಆಶಾಕಿರಣ. ಲಿಂಗೈಕ್ಯ ರೇವಣಸಿದ್ದಯ್ಯ ಸ್ವಾಮಿಗಳು ಧರ್ಮ ಸಂಸ್ಕೃತಿಯ ಸಂವರ್ಧನೆಗಾಗಿ ಸದಾ ಶ್ರಮಿಸಿದವರು. ಜನ ಸಮುದಾಯಕ್ಕೆ ಧಾರ್ಮಿಕ ಸಂಸ್ಕಾರ ಸದ್ವಿಚಾರಗಳನ್ನು ಮನವರಿಕೆ ಮಾಡಿಕೊಟ್ಟ ಶ್ರೇಯಸ್ಸು ಅವರಿಗೆ ಸಲ್ಲುತ್ತದೆ.

ಕೈವಲ್ಯ ಧಾಮ ಮಠದ ಟ್ರಸ್ಟಿಗಳು ಪುಣ್ಯಾರಾಧನೆ ಜೊತೆಗೆ 39 ಜೋಡಿ ಸಾಮೂಹಿಕ ವಿವಾಹ ಸಮಾರಂಭ ಹಮ್ಮಿಕೊಂಡಿರುವುದು ಅವರ ಸಾಮಾಜಿಕ ಚಿಂತನೆಗೆ ಸಾಕ್ಷಿಯಾಗಿದೆ. ಜೀವನದಲ್ಲಿ ಸುಖ-ದುಃಖಗಳು ಬರುವುದು ಸಹಜ. ಪವಿತ್ರವಾದ ಗೃಹಸ್ಥಾಶ್ರಮ ಸ್ವೀಕಾರ ಮಾಡಿದ ನವದಂಪತಿಗಳು ಏನೇ ಸಮಸ್ಯೆ ಬಂದರೂ ಸಾಮರಸ್ಯ ಸೌಹಾರ್ದತೆಯಿಂದ ಬಾಳಿದರೆ ಬಾಳು ಉಜ್ವಲಗೊಳ್ಳುತ್ತದೆ. ಮುತ್ತೈದೆ ಮಹಿಳೆಯರಿಗೆ ಹಸಿರು ಬಳೆ, ಕುಂಕುಮ, ಕರಿಮಣಿ ಸರ, ಮೂಗುನತ್ತು, ಕಾಲುಂಗುರ ಮತ್ತು ಮಾಂಗಲ್ಯಗಳನ್ನು ಕೊಟ್ಟ ಕೀರ್ತಿ ಶ್ರೀ ಜಗದ್ಗುರು ರೇಣುಕಾದಿ ಪಂಚಾಚಾರ್ಯರಿಗೆ ಸಲ್ಲುತ್ತದೆ ಎಂದರು.

ಇದೇ ಸಂದರ್ಭದಲ್ಲಿ ಹಠಯೋಗಿ ಶ್ರೀ ರೇವಣಸಿದ್ದೇಶ್ವರ ಶ್ರೀಗಳವರ ಗದ್ಯಪದ್ಯ ಪುರಾಣ ಕೃತಿಯನ್ನು ಶ್ರೀ ರಂಭಾಪುರಿ ಜಗದ್ಗುರುಗಳು ಬಿಡುಗಡೆ ಮಾಡಿದರು. ಚಿಟಗುಪ್ಪ ಆಲಮೇಲ ಹತ್ತಳ್ಳಿ ತಡವಲಗ ಸೇರಿದಂತೆ ಶ್ರೀಗಳು ಪಾಲ್ಗೊಂಡು ನುಡಿನಮನ ಸಲ್ಲಿಸಿದರು. ಎಂ.ಆರ್. ಪಾಟೀಲ್, ವಿಠಲಗೌಡ ಪಾಟೀಲ್, ಧನರಾಜ ಮುಜಗೊಂಡ ಇನ್ನೂ ಮೊದಲಾದ ಗಣ್ಯರು ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಜಗದ್ಗುರುಗಳಿಂದ ಆಶೀರ್ವಾದ ಪಡೆದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka